

# ಸಿಹಿ ಕಹಿ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ

Editor : MARUTI BASAVANTAPPA HOSAMANI

Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ

ಬಾಗಲಕೋಟೆಯಿಂದ ಪ್ರಕಟಿತ

RNI REG No. : KARKAN/2016/75068

SIHI KAHI

KANNADA DAILY MORNING

BAGALKOT

SK NEWS ಕನ್ನಡ

Volume : 06 Issue : 290 Sunday 07-04-2024 E-mail : maruti.b.hosamani76@gmail.com Page: 4 Price : Rs. 1/-

# ಫಲಿಸಿತು ಕನ್ನಡಿಗರ ಪ್ರಾರ್ಥನೆ...! ಸ್ವಾತಿಕ್ ಪುನರ್ಜನ್ಮ...!

**ಇಂಡಿ :** ಸಾವು ಗೆದ್ದು ಬಂದ ಸ್ವಾತಿಕ್ ನ ಯಶಸ್ವಿ ಕಾರ್ಯಾಚರಣೆ ಹಿನ್ನೆಲೆಯಲ್ಲಿ ಅಸಿಸ್ಟೆಂಟ್ ಕಮಿಷನರ್ ಅಬೀದ್ ಗದ್ಯಾಳ ಅವರಿಗೆ ಸನ್ಮಾಸಿ ಗೌರವಿಸುವ ಮೂಲಕ ತಾಲೂಕಾ ಮತ್ತು ಜಿಲ್ಲಾ ಆಡಳಿತ, ಜನ ಪ್ರತಿನಿಧಿ ಹಾಗೂ ಸರಕಾರದ ಕಾರ್ಯ ಅತ್ಯಂತ ಶ್ಲಾಘನೀಯ ಎಂದು ಅಭಿನಂದನೆ ಸಲ್ಲಿಸಿದರು.

ಶುಕ್ರವಾರ ಪಟ್ಟಣದಲ್ಲಿರುವ ತಾಲ್ಲೂಕು ಅಡಳಿತ ಸೌಧದ ಉಪ ವಿಭಾಗ ಕಛೇರಿಯಲ್ಲಿ, ಎಸ್ ಎಸ್ ಪ್ಯಾರಾ ಮೆಡಿಕಲ್ ಕಾಲೇಜು ಹಾಗೂ ನೂತನ "ಸ್ನೇಹ ಸಂಗಮ" ಗೆಳೆಯರ ಬಳಗದ ವತಿಯಿಂದ ಅಭಿನಂದನೆ ಸಲ್ಲಿಸಿದರು.

ತಾಲ್ಲೂಕಿನ ಲಚ್ಯಾಣ ಗ್ರಾಮದಲ್ಲಿ ಆಕಸ್ಮಿಕ ಜರುಗಿದ್ದ ಕೊಳವೆ ಬಾವಿ ದುರಂತದಲ್ಲಿ "ಸಾತ್ವಿಕ ಮೃತ್ಯುಂಜಯನಾಗಿ" ಹೊರ ಬಂದಿದ್ದಾನೆ. ಬೋರ್ ವೆಲ್ ನಲ್ಲಿ ಸಿಲುಕಿದ್ದ ಮಗುವಿನ ರಕ್ಷಣೆಯನ್ನು ಸುಮಾರು 20 ಗಂಟೆಗಳ ಕಾಲದ ನಿರಂತರ ಕಾರ್ಯಾಚರಣೆಯಲ್ಲಿ ಓಆಖಈ – ಖಆಖಈ, ಪೊಲೀಸರು, ಅಗ್ನಿಶಾಮಕ ದಳ, ಆರೋಗ್ಯ ಇಲಾಖೆ, ತಾಲೂಕಾ – ಜಿಲ್ಲಾ ಆಡಳಿತದ ಕಾರ್ಯಾಚರಣೆ ಹಾಗೂ ಅವಿರತ ಪರಿಶ್ರಮ ಸಾತ್ವಿಕ ವಿಜಯಶಾಲಿ ಆಗಿದ್ದಾನೆ ಎಂದು ಅಭಿನಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ನ್ಯಾಯವಾದಿ, ಎಸ್ ಎಸ್ ಪ್ಯಾರಾ ಮೆಡಿಕಲ್ ಕಾಲೇಜು ಹಾಗೂ ಆಂಗ್ಲ ಮಾದ್ಯಮ ಪ್ರಾಥಮಿಕ ಶಾಲೆಯ ಅಧ್ಯಕ್ಷ ಎಸ್ ಬಿ ಕೆಂಬೋಗಿ ಮಾತನಾಡಿದ ಅವರು, ನಮ್ಮ ತಾಲ್ಲೂಕಿನಲ್ಲಿ ಎರಡನೇ ಹಾಗೂ ಜಿಲ್ಲೆಯಲ್ಲಿ ಇದು ಮೂರನೇ ದುರ್ಘಟನೆಯಾಗಿದೆ. ಆದರೆ ಎರಡು ಘಟನೆಯಲ್ಲಿ ಯಶಸ್ವಿ ಕಾರ್ಯಾಚರಣೆ ಮಾಡಿದರೂ ಮಕ್ಕಳನ್ನು ಉಳಿಸಿ ಕೊಳ್ಳಲಾಗಲಿಲ್ಲ. ಆದರೆ ಈ ಬಾರಿ ಅತ್ಯಂತ



ಕ್ರೀಯಾಶೀಲ, ಚುರುಕುತನ ದಿಂದ ಯೋಜಿತ ಕಾರ್ಯ ನಿರ್ವಹಣೆಯಿಂದ ಮಗುವಿನ ರಕ್ಷಣೆ ಮಾಡುವಲ್ಲಿ ಯಶಸ್ವಿಯಾಗಿದ್ದು ಅತ್ಯಂತ ಹೆಮ್ಮೆಯ ವಿಷಯವಾಗಿದೆ ಎಂದು ಹೇಳಿದರು.

ಪತ್ರಕರ್ತ ಶಂಕರ್ ಜಮಾದಾರ ಮಾತನಾಡಿದ ಅವರು, ಇಡೀ ರಾಜ್ಯದ ಕನ್ನಡಿಗರ ಒಕ್ಕೊರಲಿನ ಪ್ರಾರ್ಥನೆ ಯಿಂದ, ಈ ಭಾಗದ ದೈವಿ ಶಕ್ತಿ ಕೃಪೆಯಿಂದ ತಾಲೂಕಾ – ಜಿಲ್ಲಾ ಆಡಳಿತ ಹಾಗೂ ಜನ ಪ್ರತಿನಿಧಿಗಳ ಅವಿರತವಾದ ಪರಿಶ್ರಮ ದಿಂದ ಸ್ವಾತಿಕ್ ನ ಪುನರ್ಜನ್ಮವಾಯಿತು. ಭೀಮಾತೀರದ ಪಯಣ ಎಂದರೆ, ಇಲ್ಲಿ ಕಷ್ಟಕರ ನಿಲ್ದಾಣಗಳು, ಅಪಾಯಕಾರಿ ಸವಾಲುಗಳು ಹೆಚ್ಚಾಗಿವೆ. ಇಲ್ಲಿ ಜನರೊಂದಿಗೆ ಪರಸ್ಪರ ನಂಬಿಕೆ ವಿಶ್ವಾಸ ಪ್ರಾಮಾಣಿಕ ಕರ್ತವ್ಯಗಳೊಂದಿಗೆ ಮನುಷ್ಯ ಜಾತಿ "ತಾನೊಂದೆ ನೆಲಂ" ಆದಿಕವಿ ಪಂಪನ ಮಾತನ್ನು ಅನುಸರಿಸಿ ಕೊಂಡು ಸಾಗಿದರೆ ಖಂಡಿತ ಯಶಸ್ವಿ ಯಾಗಲು ಸಾಧ್ಯ. ಉಪನ್ಯಾಸಕ ಮಹಾಂತೇಶ ಪಾಟೀಲ, ಶಿಕ್ಷಕ, ಸಾಹಿತಿ ದಶರಥ ಕೋರಿ ಮಾತನಾಡಿದರು.

ಈ ಸಂದರ್ಭದಲ್ಲಿ ಜೈ ಹನುಮಾನ್ ಸಹಕಾರಿ ಸಂಘದ ಅಧ್ಯಕ್ಷ ಜಗದೇವ ರಾಠೋಡ, ಉಪನ್ಯಾಸಕ ಮಕ್ತುಮ ಮುಲ್ಲಾ, ಫಯಾಜ ಭಾಗವಾನ, ಸುರೇಶ ಡೊಂಗ್ರಜ್, ಶಿವ ಶರಣ ನಾಟಿಕಾರ, ರೇವಣ್ಣ ಹತ್ತಳ್ಳಿ, ಹಣಮಂತ ಗುಡ್ಲ, ಸಾಯಿಕುಮಾರ ಪಾಟೀಲ, ರಫಿಕ್ ಚೌಧರಿ, ಸುನೀಲ ಚವ್ಹಾಣ ಹಾಗೂ ಇನ್ನೂ ಅನೇಕ ಸ್ನೇಹಿತ ಮಿತ್ರರು ಉಪಸ್ಥಿತರಿದ್ದರು.

**ಜಿಲ್ಲಾ ವರದಿಗಾರರು ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಶಿವಪ್ಪ.ಬಿ.ಹರಿಜನ.ಇಂಡಿ**

# "ಸುಮಾ" ಕನ್ನಡ ಚಲನ ಚಿತ್ರಕ್ಕೆ ಮೂಹೂರ್ತ"

**ಬೆಂಗಳೂರು :** 'ಓಂಸಾಯಿ ಸಿನೆಮಾಸ್' ಬ್ಯಾನರಿನಲ್ಲಿ ನಿರ್ಮಾಣ ವಾಗುತ್ತಿರುವ ಮಹಿಳಾ ಪ್ರಧಾನ ಕಥಾಹಂದರ ಹೊಂದಿರುವ'ಸುಮಾ'ಸಿನಿಮಾದ ಮುಹೂರ್ತ ಸಮಾರಂಭ ಬೆಂಗಳೂರಿನ ತ್ಯಾಗರಾಜ ನಗರದ ಗಣಪತಿ ದೇವಸ್ಥಾನದಲ್ಲಿ ನೆರವೇರಿತು. ಹಿರಿಯ ನಟ, ನಿರ್ದೇಶಕ ರವಿಕಿರಣ್ ಕ್ಯಾಮರಾ ಸ್ವಿಚ್ ಆನ್ ಮಾಡಿದರೆ, ನಿರ್ಮಾಪಕರಾದ ಸಂಜಯ್ಗೌಡ ಕ್ಲಾಪ್ ಮಾಡುವ ಮೂಲಕ ಸಿನಿಮಾದ ಚಿತ್ರೀಕರಣಕ್ಕೆ ಚಾಲನೆ ನೀಡಿದರು.ಈಗಾಗಲೇಕನ್ನಡದಲ್ಲಿ 'ಶ್ರೀಕಬ್ಬಾಳಮ್ಮನ ಮಹಿಮೆ', 'ಮನೆ','ಬ್ಯಾಂಕ್‌ಲೋನ್','ಸುಳಿ' ಸೇರಿದಂತೆನಾಲ್ಕುಸಿನಿಮಾಗಳನ್ನು ನಿರ್ದೇಶಿಸಿ ಸೈಎನಿಸಿ ಕೊಂಡಿರುವ ರಶ್ಮಿ ಎಸ್. 'ಸುಮಾ' ಸಿನಿಮಾಕ್ಕೆ ಕಥೆ,ಚಿತ್ರಕಥೆ,ಸಂಭಾಷಣೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. 'ಇದೊಂದು ಮಹಿಳಾ ಪ್ರಧಾನ ಕಥಾಹಂದರದ ಸಿನಿಮಾ. 'ಸುಮಾ' ಅಂದ್ರೆ ಸಂಪೂರ್ಣ ಮೊಗ್ಗು ಅಲ್ಲದ, ಸಂಪೂರ್ಣ ಅರಳಿಯೂ ಇರದಂತಹ ಹೂವು. ಈ ಸಿನಿಮಾದ ನಾಯಕಿಯ ಪಾತ್ರ ಕೂಡ ಹಾಗೇ ಇರುವಂಥದ್ದು. ನಮ್ಮ ನಡುವೆಯೇ ಇರುವಂಥ ಹುಡುಗಿಯೊಬ್ಬಳ ಅಂತರಂಗದ ಕಥೆ ಈ ಸಿನಿಮಾದಲ್ಲಿದೆ.ಮುಂದಿನ ದಿನಗಳಲ್ಲಿ ಚಿತ್ರದ ನಾಯಕಿ ಮತ್ತು ಸಿನಿಮಾದ ಬಗ್ಗೆ ಇನ್ನಷ್ಟು ಮಾಹಿತಿ ನೀಡಲಿದ್ದೇವೆ'ಎಂದು ನಿರ್ದೇಶಕಿ ರಶ್ಮಿತಿಳಿಸಿದರು.

ಇದೇ ಏಪ್ರಿಲ್ ತಿಂಗಳಿನಿಂದ 'ಸುಮಾ' ಸಿನಿಮಾದ ಚಿತ್ರೀಕರಣ ಪ್ರಾರಂಭವಾಗಲಿದ್ದು ಒಟ್ಟು 25 ದಿನಗಳ ಕಾಲ ಒಂದೇ ಹಂತದಲ್ಲಿ ಮಂಡ್ಯ, ಮದ್ದೂರು, ಆಲಭುಜನಹಳ್ಳಿ, ಕೆ. ಎಂ ದೊಡ್ಡಿ, ನಗರಕೆರೆ ಸುತ್ತಮುತ್ತ ಸಿನಿಮಾದ ಚಿತ್ರೀಕರಣ ನಡೆಯಲಿದೆ. ಮೈಸೂರು ಮೂಲದ ಪ್ರದೀಪ್ ಗೌಡ 'ಸುಮಾ' ಸಿನಿಮಾದಲ್ಲಿ ನಾಯಕನಾಗಿ ಅಭಿನಯಿಸುತ್ತಿದ್ದು, ಉಳಿದಂತೆ ಬಾಲರಾಜವಾಡಿ, ರೇಣು ಶಿಕಾರಿ, ಮುರಳೀಧರ್ ಡಿ. ಆರ್, ಕಾವ್ಯ ಪ್ರಕಾಶ್, ರೋಹಿಣಿ, ಸುನಂದ ಕಲಬುರ್ಗಿ, ರೇಣುಕುಮಾರ್ ಸಂಸ್ಥಾನಮಠ , ಅವಿನಾಶ ಗಂಜಿಹಾಳ, ಶಿವಕುಮಾರ್ ಆರಾಧ್ಯ , ಹರಿಹರನ್ ಬಿ.ಪಿ ಮುಂತಾದವರು ಅಭಿನಯಿಸುತ್ತಿದ್ದಾರೆ. ಶಂಖಿ, ನಟರಾಜ್ ಛಾಯಾಗ್ರಹಣ, ಮುತ್ತುರಾಜ್ ಟಿ. ಸಂಕಲನ , ಸಿನಿಮಾದ ಹಾಡುಗಳಿಗೆ ಎನ್. ರಾಜು ಸಂಗೀತ , ಸತೀಶ್



ಜೋಶಿ ಹಾವೇರಿ ಸಾಹಿತ್ಯ ಮತ್ತು ಸಹ ನಿರ್ದೇಶನವಿದೆ. ಮೇಘನ ಹಳಿಯಾಳ ಹಾಡಿಗೆ ಧ್ವನಿಯಾಗಲಿದ್ದು, ಪತ್ರಿಕಾ ಸಂಪರ್ಕ ಕಾರ್ತಿಕ್ ಸುಧನ್, ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿ ಅವರದಿದೆ. ಸಿನಿಮಾಕ್ಕೆ ರಂಗಸ್ವಾಮಿ ಟಿ (ರವಿ) ಸಹ ನಿರ್ಮಾಪಕರಾಗಿದ್ದಾರೆ. ಚಿತ್ರತಂಡದ ಯೋಜನೆಯಂತೆ, ಇದೇ ಆಗಷ್ಟ್ ವೇಳೆಗೆ 'ಸುಮಾ' ಸಿನಿಮಾದ ಕೆಲಸಗಳನ್ನು ಪೂರ್ಣಗೊಳಿಸಿ, ಪ್ರೇಕ್ಷಕರ ಮುಂದೆ ತರುವ ಯೋಚನೆಯಲ್ಲಿದೆಚಿತ್ರತಂಡ.

**ವರದಿ: ಡಾ.ಪ್ರಭುಗಂಜಿಹಾಳ ಮೊ:9448775346**

# ರಂಗೋಲಿ ಬಿಡಿಸುವ ಮೂಲಕ ಮತದಾನ ಜಾಗೃತಿ

**ಬಾಗಲಕೋಟೆ :** ನವನಗರದ ಸರಕಾರಿ ಮೆಟ್ರಿಕ್ ನಂತರದ ಪರಿಶಿಷ್ಟ ಜಾತಿ ಮತ್ತು ಪಂಗಡದ ಬಾಲಕಿಯರವಸತಿ ನಿಲಯಗಳಲ್ಲಿ ರಂಗೋಲಿ ಬಿಡಿಸುವ ಮೂಲಕ ಮತದಾನ ಜಾಗೃತಿ ಮೂಡಿಸಲಾಯಿತು.



ಜಿಲ್ಲೆಯಲ್ಲಿ ಮತದಾನದ ಪ್ರಮಾಣವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಜನರಲ್ಲಿ ಜಾಗೃತಿ ಮೂಡಿಸಲು ಸ್ವೀಪ್ ಕಾರ್ಯ ಕ್ರಮಗಳನ್ನು ವ್ಯಾಪಕವಾಗಿ ಅನುಷ್ಠಾನಗೊಳಿಸಲಾಗುತ್ತಿದೆ. ಈ ಹಿನ್ನಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕಿ ಸೈರಾಬಾನು ನದಾಫ್ ಅವರು ತಮ್ಮ ವ್ಯಾಪ್ತಿಯ ಬಾಲಕಿಯರವಸತಿ ನಿಲಯಗಳಲ್ಲಿ ಸುಂದರವಾದ ರಂಗೋಲಿಯಲ್ಲಿ ಓಟ್ ಇಂಡಿಯಾ, ಮೇ 7 ರಂದು ತಪ್ಪದೇ ಮತದಾನ ಮಾಡಿ, ಚುನಾವಣಾ ಪರ್ವ, ದೇಶದ ಗರ್ವ, ನಮ್ಮ ಮತ ನಮ್ಮ ಹಕ್ಕು, ಪ್ರಜಾಪ್ರಭುತ್ವದಲ್ಲಿ ಮತದಾನವೇ ಹಬ್ಬ ಎಂದು ವಿದ್ಯಾರ್ಥಿಗಳ ಮೂಲಕ ಬಿಡುಸುವ ಮೂಲಕ ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕಿ ಸೈರಾಬಾನು ನದಾಫ್ ಅವರು ನಿಲಯದಲ್ಲಿರುವ 18 ವರ್ಷ ಪೂರೈಸಿದ ಎಲ್ಲ ವಿದ್ಯಾರ್ಥಿಗಳು ಮೇ7ರಂದುತಪ್ಪದೇಮತದಾನದ ಹಕ್ಕನ್ನು ಚಲಾಯಿಸುವ ಮಾಡುವ ಮೂಲಕ ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸಬೇಕು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ನಂದಾ ಹಣಮರಟ್ಟಿ, ನಿಲಯ ಪಾಲಕರಾದ ಶರೀಪಾ ಶೆರೆಗಾರ, ಲಕ್ಷ್ಮೀ ಗಾಣಿಗೇರ, ಸುಮಿತ್ರಾ ಹೊಸಮನಿ ಸೇರಿದಂತೆ ಇತರರು ಇದ್ದರು.

# ವಿವಿಧ ಚೆಕ್‌ಪೋಸ್ಟಗಳಿಗೆ ಜಿಲ್ಲಾಧಿಕಾರಿ ಭೇಟಿ ಪರಿಶೀಲನೆ

**ಬಾಗಲಕೋಟೆ:** ಜಿಲ್ಲೆಯ ಬಾಗಲಕೋಟೆ ಮತ್ತು ಹುನಗುಂದ ಮತಕ್ಷೇತ್ರಗಳಲ್ಲಿ ಸ್ಥಾಪಿಸಲಾದ ವಿವಿಧ ಚೆಕ್‌ಪೋಸ್ಟಗಳಿಗೆ ಮಂಗಳವಾರ ರಾತ್ರಿ ಜಿಲ್ಲಾಧಿಕಾರಿಗಳು ಆಗಿರುವ ಜಿಲ್ಲಾ ಚುನಾವಣಾಧಿಕಾರಿ ಜಾನಕಿ ಕೆ.ಎಂ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬಾಗಲಕೋಟೆ ಮತಕ್ಷೇತ್ರದ ಹೊನ್ನಾಕಟ್ಟಿ, ಕಮತಗಿ ಚೆಕ್‌ಪೋಸ್ಟ ಮತ್ತು ಹುನಗುಂದ ಮತಕ್ಷೇತ್ರದ ಗುಗ್ಗಲಮರಿ ಚೆಕ್‌ಪೋಸ್ಟಗಳಿಗೆ ಭೇಟಿ ನೀಡಿ ಪರಿಶೀಲಿಸಿದ ಅವರು ಚೆಕ್‌ಪೋಸ್ಟನಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಯವೈಖರಿ, ತಪಾಸಣೆ ಮಾಡಲಾದ ವಾಹನಗಳ ಮಾಹಿತಿಯನ್ನು ಪಡೆದುಕೊಂಡರು.



ಜಿಲ್ಲಾಡಳಿತ ಭವನದಲ್ಲಿರುವ ಜಿ.ಪಂ ಸಭಾಭವನದಲ್ಲಿ ಸ್ಥಾಪಿಸಲಾಗಿರುವ ಜಿಲ್ಲಾ ನಿಯಂತ್ರಣ ಕೊಠಡಿಗೆ ಭೇಟಿ ನೀಡಿ ಚೆಕ್‌ಪೋಸ್ಟಗಳಮೇಲೆಕಣ್ಣಾವಲು,ಸಿ–ವಿಜಿಲ್ ಆ್ಯಪ್ ಮೂಲಕ ಮತ್ತು ಸಹಾಯವಾಣಿ ಸಂಖ್ಯೆ 1950ಗೆ ಕರೆಗಳ ಮೂಲಕ ದೂರು ಸ್ವೀಕಾರ, ವಿದ್ಯುನ್ಮಾನ, ಮುದ್ರಣ ಮಾದ್ಯಮ ಹಾಗೂ ಸಾಮಾಜಿಕ ಜಾಲ ತಾಣಗಳಲ್ಲಿ ಪ್ರಸಾರವಾಗುವ ಸುದ್ದಿಗಳ ಪರಿಶೀಲನೆ ಕಾರ್ಯಗಳನ್ನು ವೀಕ್ಷಣೆ ಮಾಡಿ ಮಾಹಿತಿ ಪಡೆದುಕೊಂಡರು.

# ಬೇಸಿಗೆ ಬವಣೆ ನೀಗಿಸಲು ನಗರಸಭೆ ಸನ್ನದ್ಧ

**ರಬಕವಿ–ಬನಹಟ್ಟಿ :** ಬೇಸಿಗೆ ಶುರುವಾಗುತ್ತಿದ್ದಂತೆ ರಬಕವಿ–ಬನಹಟ್ಟಿ ನಗರದಲ್ಲಿ ಕುಡಿಯುವ ನೀರು ಪೂರೈಕೆ ಮಾಡುವುದೇ ದೊಡ್ಡ ಸವಾಲಾಗುತ್ತಿದೆ. ಮುಂದಿನ ಹದಿನೈದು ದಿನ ಬನಹಟ್ಟಿ ಹಾಗು ಎಂಟು ದಿನ ರಬಕವಿ ಪಟ್ಟಣಕ್ಕೆ ಸಮೀಪದ ಕೃಷ್ಣಾ ನದಿಯಿಂದ ನೀರು ಪೂರೈಕೆಯಾಗಲಿದೆ. ಮುಂದಿನದಿನಗಳಲ್ಲಿನಬೇಸಿಗೆದಿನಗಳಲ್ಲಿನೀರು ಒದಗಿಸುವಲ್ಲಿ ನಗರಸಭೆ ಸಕಲ ರೀತಿಯಲ್ಲಿ ಸನ್ನದ್ಧವಾಗಿದೆ ಎಂದು ಪೌರಾಯುಕ್ತ ಜಗದೀಶ ಈಟಿ ತಿಳಿಸಿದರು.



ಅವರು ಮಂಗಳವಾರ ಸಮೀಪದ ಕೃಷ್ಣಾ ನದಿಯಲ್ಲಿನ ರಬಕವಿ ಹಾಗು ಬನಹಟ್ಟಿ ಜಾಕವೆಲ್ಗೆ ಭೆಟ್ಟಿ ನೀಡಿ ಕುಡಿಯುವ ನೀರಿನ ಸರಬರಾಜಿನ ಬಗ್ಗೆ ಪರಿಶೀಲನೆ ನಡೆಸಿ ಪತ್ರಿಕೆಯೊಂದಿಗೆ ಮಾತನಾಡಿದ ಅವರು, ನಗರ ಮತ್ತು ಪಟ್ಟಣ ಪ್ರದೇಶದಲ್ಲಿ ಆಗಾಗ್ಗೆ ನೀರಿನ ಸಮಸ್ಯೆ ತಲೆದೋರುತ್ತಿದೆ. ಹೀಗಾಗಿ ಮುಂಜಾಗ್ರತಾ ಕ್ರಮವಾಗಿ ನೀರಿನ ಸಮಸ್ಯೆ ಹಾಗು ಜಾನುವಾರುಗಳಿಗೆ ಮೇವಿನ ಬೇಡಿಕೆ ಗುರುತಿಸುವಂತೆ ಸಂಬಂಧಿಸಿದ ಅಧಿಕಾ–ರಿಗಳಿಗೆ ಸೂಚನೆ ನೀಡಲಾಗಿದೆಯಲ್ಲದೇ ಬೇಸಿಗೆಯಲ್ಲಿಯ ತೊಂದರೆಗಳನ್ನು ನಿಭಾಯಿಸಲು ನಗರಸಭೆ ಸನ್ನದ್ಧವಾಗಿದೆ ಎಂದರು.

ಬೇಸಿಗೆಯಲ್ಲಿ ದಿನ ಬೆಳಗಾಗುತ್ತಿದ್ದಂತೆ ನೀರಿನ ಭವಣೆ ತೀರಾ ಇತ್ತು. ಇದೀಗ ಅವೆಲ್ಲವುಗಳಿಗೆ ತಿಲಾಂಜಲಿಯಿಟ್ಟು, ಸುಮಾರು ಹನ್ನೆರಡು ಶುದ್ಧ ಕುಡಿಯುವ ನೀರಿನ ಘಟಕಗಳು ಕಾರ್ಯನಿರ್ವಹಿಸುತ್ತಿದ್ದು , ಅದರಂತೆ ಇಪ್ಪತ್ತು ಕಡೆಗಳಲ್ಲಿ ಖಾಸಗಿ ಘಟಕಗಳೂ ನೀರು ಒದಗಿಸುತ್ತಿವೆ.

26 ತೆರೆದ ಬಾವಿಗಳಿದ್ದು , 328 ಕೊಳವೆ ಬಾವಿಗಳಿವೆ. ಇವೆಲ್ಲವುಗಳನ್ನು ಇದೀಗ ನಗರಸಭೆ ತನ್ನ ಸುಪರ್ದಿಯಲ್ಲಿಟ್ಟುಕೊಂಡು ಎಲ್ಲ31ವಾರ್ಡಗಳಜನತೆಗೆನೀರುಒದಗಿಸುವಲ್ಲಿ ಸಿಬ್ಬಂದಿ ವರ್ಗ ಸಕಲ ರೀತಿಯಲ್ಲಿ ತಯಾ–ರಿಯಲ್ಲಿದೆ. ಪ್ರಸಕ್ತ ವರ್ಷ ಮತ್ತೇ ಹದಿನೈದು ಹೊಸ ಕೊಳವೆ ಬಾವಿಗಳನ್ನು ಕೊರೆಸುವ ವ್ಯವಸ್ಥೆಯಲ್ಲಿದ್ದು, ಅವಶ್ಯವಿರುವ ಪ್ರದೇಶಗಳಲ್ಲಿ ಕೊಳವೆ ಬಾವಿ ಕೊರೆಸಲಾಗುವದೆಂದು ಪೌರಾಯುಕ್ತ ಈಟಿ ಸ್ಪಷ್ಟಪಡಿಸಿದರು.


ನದಿ ಪಾತ್ರಕ್ಕೆ ಭೇಟಿ :

ಇದೇ ಸಂದರ್ಭ ರಬಕವಿಯ ಸಮೀಪದ ಕೃಷ್ಣಾ ನದಿಯ ಮಹಿಷವಾಡಗಿ ಬ್ಯಾರೇಜ್ನ್ನು ಬೆಳಗಾವಿ ವಿಭಾಗದ ಯೋಜನಾಧಿಕಾರಿ ವಿಜಯ ಮೆಕ್ಕಳಕಿ, ಬಿ. ವಾಯ್. ಸುರಕುಡ, ಅಭಿಯಂತರರಾದ ಎಸ್. ಎಸ್. ಹೇರಲಗಿ, ರಾಘವೇಂದ್ರ ಕುಲಕರ್ಣಿ, ವೈಶಾಲಿ ಹಿಪ್ಪರಗಿ ಸೇರಿದಂತೆ ಸಿಬ್ಬಂದಿಗಳ ತಂಡ ಭೆಟ್ಟಿ ನೀಡಿ ಪರಿಶೀಲನೆ ನಡೆಸಿತು.

# ಖಾಲಿಯಾಗುತ್ತಿರುವ ಹಿಪ್ಪರಗಿ ಜಲಾಶಯ

# ಇನ್ನೆರಡು ವಾರ ಮಾತ್ರ ನೀರು

**ರಬಕವಿ–ಬನಹಟ್ಟಿ :** ಬೆಳಗಾವಿ, ವಿಜಯಪುರ ಹಾಗು ಬಾಗಲಕೋಟೆ ಜಿಲ್ಲೆಗಳ ಜೀವಜಂತುಗಳ ಸಂಜೀವಿನಿಯಾಗಿರುವ ಹಿಪ್ಪರಗಿ ಜಲಾಶಯ ಸಂಪೂರ್ಣ ಬತ್ತಿ ಹೋಗುವ ಲಕ್ಷಣಗಳ ಗೋಚ–ರಿಸುತ್ತಿದ್ದು , ಜನತೆಗೆ ನೀರಿನ ಹಾಹಾಕಾರ ಎದುರಾಗಲಿದೆ.



6 ಟಿಎಂಸಿ ಸಾಮಥ–ರ್ಥ್ಯ ಹೊಂದಿರುವ ಹಿಪ್ಪರಗಿ ಜಲಾಶಯದಲ್ಲಿ ಕೇವಲ 0.07 ಟಿಎಂಸಿಯಷ್ಟು ಮಾತ್ರ ನೀರು ಸಂಗ್ರಹ ಇದೆ. ಜಲಾಶಯದಿಂದ ದಿನಂಪ್ರತಿ 0.07 ಟಿಎಂಸಿಯಷ್ಟು ನೀರು ಖಾಲಿಯಾಗುತ್ತಿದೆ. ಇತ್ತ ಜನರ ನಿತ್ಯದ ಬಳಕೆ, ಮತ್ತೊಂದೆಡೆ ಬಿರುಬಿಸಿಲಿನ ತಾಪಕ್ಕೆ ನೀರು ತೀವ್ರವಾಗಿ ಇಳಿಮುಖವಾಗುತ್ತಿದೆ. ಜಲಾಶಯದ ಹಿಂಭಾಗದಲ್ಲಿ ಮಾತ್ರ ನೀರು ಇದ್ದು , ಮುಂಭಾಗ ಸಂಪೂರ್ಣವಾಗಿ ಖಾಲಿಯಾಗಿದೆ. ಇದರಿಂದ ಮುಂದಿನ ಭಾಗದ ಜನರು, ರೈತರು ತೀವ್ರ ಸಂಕಷ್ಟದಲ್ಲಿದ್ದಾರೆ. ರಬಕವಿ–ಬನಹಟ್ಟಿ ಸಮೀಪದ ಕೃಷ್ಣಾ ನದಿಗೆ ನಿರ್ಮಿಸಲಾಗಿರುವ ಮಹಿಷವಾಡಗಿ ಬ್ಯಾರೇಜ್ ಕಾಣುತ್ತಿದ್ದು, ಹಲವಾರು ತಿಂಗಳಿಂದ ನೀರಲ್ಲಿ ಮುಳಗಿದ್ದ ಬ್ಯಾರೇಜ್ ಕೆಲವು ದಿನಗಳಿಂದ ಕಾಣುತ್ತಿರುವುದಲ್ಲದೇ ನೀರಿನ ಮಟ್ಟ ಕೆಲ ದಿನಗಳಲ್ಲಿ ದಿಢೀರನೇ ಭಾರೀ ಕುಸಿತ ಕಂಡ ಹಿನ್ನೆಲೆಯಲ್ಲಿ ಜಾನುವಾರುಗಳಿಗೆ ಬೇಸಿಗೆಯ ಆತಂಕ ಶುರುವಾಗಿದೆ. ಇದೇ ರೀತಿ ಪ್ರತಿ ದಿನ ಖಾಲಿಯಾದರೆ ಏಪ್ರಿಲ್ ಎರಡನೇ ವಾರದಲ್ಲಿ ನೀರು ಖಾಲಿಯಾಗಬಹುದು ಎಂದು ಅಂದಾಜಿಸಲಾಗಿದೆ. ಈಗಾಗಲೇ ಬ್ಯಾರೇಜ್ನ ಗೇಟ್ಗಳು ಕಾಣುತ್ತಿದ್ದು ರಸ್ತೆ ಸಂಚಾರ ಪ್ರಾರಂಭವಾಗಿದೆ.

> ‘ಹಿಪ್ಪರಗಿ ಜಲಾಶಯದಲ್ಲಿ ನೀರಿನ ಸಾಂದ್ರತೆ ದಿನದಿಂದ ದಿನಕ್ಕೆ ಕಡಿಮೆಯಾಗುತ್ತಿದೆ. ಇನ್ನೆರಡು ವಾರ ಮಾತ್ರ ನೀರು ದೊರಕಬಹುದು. ನೀರನ್ನು ಕಾಳಜಿಪೂರ್ವಕಬಳಕೆಯನ್ನು ನಾಗರಿಕರು ಮಾಡಬೇಕು’.
>
> **–ವಿ. ಎಸ್. ನಾಯಕ, ಸಹಾಯಕ ಅಭಿಯಂತರ, ಹಿಪ್ಪರಗಿ ಜಲಾಶಯ.**

> **ಕೃಷ್ಣಾ ನದಿ ನೀರು ಏಪ್ರಿಲ್ 15 ರವರೆಗೆ ಬರಬಹುದು. ಆದರೂ ಮುಂಜಾಗೃತ ಕ್ರಮವಾಗಿ ನಗರಸಭೆ ಎಲ್ಲ ಸಿದ್ಧತೆಗಳನ್ನು ಮಾಡಿಕೊಂಡಿದೆ. ಕಾರಣಸಾರ್ವಜನಿಕರುನೀರನ್ನು ಮಿತವ್ಯಯವಾಗಿ ಬಳಕೆ ಮಾಡಬೇಕು. ಕೃಷ್ಣಾ ನದಿಯಲ್ಲಿ ನಿಂತ ನೀರಾಗಿರುವುದರಿಂದ ಸಾರ್ವಜನಿಕರು ಆರೋಗ್ಯದ ದೃಷ್ಟಿಯಿಂದ ನೀರನ್ನು ಸೋಸಿ, ಕಾಯಿಸಿ, ಆರಿಸಿ ನೀರನ್ನು ಕುಡಿಯಬೇಕು.’**
>
> **–ಜಗದೀಶ ಈಟಿ, ಪೌರಾಯುಕ್ತರು, ನಗರಸಭೆ ರಬಕವಿ–ಬನಹಟ್ಟಿ**

# ಸಮರ್ಥವಾಗಿ ಜಿಲ್ಲೆಯನ್ನು ಪ್ರತಿನಿಧಿಸುವ ಸಾಮರ್ಥ್ಯ ಮೃಣಾಲ್ ಹೆಬ್ಬಾಳಕರ್‌ಗೆ ಇದೆ: ಚನ್ನರಾಜ ಹಟ್ಟಿಹೊಳಿ

## ಸವದತ್ತಿ ತಾಲೂಕಿನಾದ್ಯಂತ ಕಾಂಗ್ರೆಸ್ ಗೆ ಅಭೂತಪೂರ್ವ ಬೆಂಬಲ



**ಬೆಳಗಾವಿ :** ಮೇ 7ರಂದು ನಡೆಯಲಿರುವ ಬೆಳಗಾವಿ ಲೋಕಸಭಾ ಕ್ಷೇತ್ರದ ಚುನಾವಣೆಯ ಹಿನ್ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಪರ ಸವದತ್ತಿ ವಿಧಾನಸಭಾ ಕ್ಷೇತ್ರದ ವಿವಿಧೆಡೆ ಪ್ರಚಾರ ಸೋಮವಾರ ಪ್ರಚಾರ ಸಭೆಗಳನ್ನು ಹಮ್ಮಿಕೊಳ್ಳಲಾಗಿದ್ದು, ಕ್ಷೇತ್ರಾದ್ಯಂತ ಅಭೂತಪೂರ್ವ ಜನಬೆಂಬಲ ವ್ಯಕ್ತವಾಗುತ್ತಿದೆ ಎಂದು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಹೇಳಿದರು.

ಗೊರಾಬಾಳ ಮತ್ತು ಬಸಿಡೋಣಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಸಭೆಯಲ್ಲಿ ಮಾತನಾಡಿದ ಅವರು, ನಿರೀಕ್ಷೆಗೂ ಮೀರಿ ಜನರು ಬೆಂಬಲ ಸೂಚಿಸುತ್ತಿದ್ದಾರೆ. ಮೃಣಾಲ ಹೆಬ್ಬಾಳಕರ್ ಅತ್ಯಂತ ಪ್ರಚಂಡ ಬಹುಮತದಿಂದ ಆಯ್ಕೆಯಾಗುವುದರಲ್ಲಿ ಸಂದೇಹವಿಲ್ಲ ಎಂದರು.

ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಯೋಜನೆಗಳು ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ಜನರು ಮೆಚ್ಚಿಕೊಂಡಿದ್ದಾರೆ. ಜೊತೆಗೆ ಜನರ ಬದುಕನ್ನು ಕಟ್ಟಿಕೊಡುವ ಕೆಲಸವನ್ನು ಕಾಂಗ್ರೆಸ್ ಸರಕಾರ ಮಾಡುತ್ತಿದೆ. ಮೃಣಾಲ ಹೆಬ್ಬಾಳಕರ್ ಯುವಕನಿದ್ದು, ಕ್ಷೇತ್ರದ ಅಭಿವೃದ್ಧಿಗೆ ಹಲವು ಕನಸನ್ನು ಕಟ್ಟಿಕೊಂಡಿದ್ದಾನೆ. ಅತ್ಯಂತ ಸಮರ್ಥವಾಗಿ ಜಿಲ್ಲೆಯನ್ನು ಪ್ರತಿನಿಧಿಸುವ ಸಾಮರ್ಥ್ಯ ಹೊಂದಿದ್ದಾನೆ. ಹಾಗಾಗಿ ಎಲ್ಲರೂ ಮೃಣಾಲ ಹೆಬ್ಬಾಳಕರ್ ಗೆ ಮತ ನೀಡಿ ಆಯ್ಕೆ ಮಾಡಬೇಕು ಎಂದು ಅವರು ಕೋರಿದರು.

ಶಾಸಕ ವಿಶ್ವಾಸ ವೈದ್ಯ ಮಾತನಾಡಿ, ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲಿ ಹಿಂದೆಂದೂ ಕಾಣದಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದಾರೆ. ಕ್ಷೇತ್ರ ರಾಜ್ಯದಲ್ಲೇ ಮಾದರಿಯಾಗುತ್ತ ಮುನ್ನಡೆದಿದೆ. ಅದೇ ಮಾದರಿಯಲ್ಲಿ ಬೆಳಗಾವಿ ಲೋಕಸಭಾ ಕ್ಷೇತ್ರದ ಅಭಿವೃದ್ಧಿ ಮಾಡಲು ಮೃಣಾಲ ಹೆಬ್ಬಾಳಕರ್ ಅವರನ್ನು ಬೆಂಬಲಿಸೋಣ ಎಂದರು.

ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಮಾತನಾಡಿ, ಕಳೆದ 10 ವರ್ಷದಿಂದ ನಾನು ಸಕ್ರೀಯವಾಗಿ ಸಾಮಾಜಿಕ ಮತ್ತು ರಾಜಕೀಯ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿದ್ದು, ಕ್ಷೇತ್ರದ ಸಮಸ್ಯೆ ಮತ್ತು ಜನರ ಬೇಕು ಬೇಡಗಳನ್ನು ತಿಳಿದುಕೊಂಡಿದ್ದೇನೆ. ಕ್ಷೇತ್ರದ ಅಭಿವೃದ್ಧಿ ಸ್ಪಷ್ಟ ಯೋಚನೆಯನ್ನು ಹೊಂದಿದ್ದೇನೆ. ಹಾಗಾಗಿ ನನಗೆ ಮತ ನೀಡಿ ಅವಕಾಶ ಮಾಡಿಕೊಟ್ಟಲ್ಲಿ ಜನರು ಮೆಚ್ಚುವ ರೀತಿಯಲ್ಲಿ ಕೆಲಸ ಮಾಡಿ ತೋರಿಸುತ್ತೇನೆ ಎಂದರು.

ಶಿವಪ್ಪ ಸುಬ್ಬರ, ಬಸಯ್ಯ ಮಠಪತಿ, ದುಂಡಪ್ಪ ಖನವಿ, ಗಾಜಿ ವಕೀಲರು, ರಾಮನಗೌಡ ತಿಪ್ಪರಾಶಿ, ರಾಜು ಕಗದಾಳ, ಡಿ.ಡಿ.ಟೋಪೋಜಿ, ಬಸವರಾಜ ಆಯಟ್ಟಿ, ಗೋಪಾಲ ದಳವಾಯಿ, ಪತ್ರೆಪ್ಪ ಚಿಕ್ಕುಂಬಿ, ಶ್ರೀಕಾಂತ ನೇಗಿನಾಳ, ಈರಪ್ಪ ಕೊಡ್ಲಿ, ಮಹಾರಾಜಗೌಡ ಪಾಟೀಲ, ಮುತ್ತು ಬಾಂಗಿಡದ, ಲಕ್ಕಪ್ಪ ಸುಬ್ಬರ, ಹನಮಂತ ಮುಳ್ಳೂರ್, ಎಂ.ಎಸ್. ಜಾವೂರ್, ಸಿದ್ದು ಶಿರಹಟ್ಟಿ, ದ್ಯಾಮಣ್ಣ ಮ್ಯಾದಾರ್ ಮುಂತಾದವರು ಇದ್ದರು.

# ಮಹಿಳಾ ಒಕ್ಕೂಟ: ಪದಾಧಿಕಾರಿಗಳ ಆಯ್ಕೆ

**ಕಾರಟಗಿ :** ಭಾರತೀಯ ಮಹಿಳಾ ಒಕ್ಕೂಟದ ಪ್ರಥಮ ಸಮ್ಮೇಳನವು ಗುರುವಾರ ನಡೆದು, ಒಕ್ಕೂಟಕ್ಕೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಜೊತೆಗೆ ಮುಂದಿನ ಕಾರ್ಯಕ್ರಮಗಳ ಬಗ್ಗೆ ಚರ್ಚೆ ನಡೆಸಲಾಯಿತು ಎಂದು ಮುಖ್ಯಸ್ಥೆ ಸುನೀತಾ ತಿಳಿಸಿದ್ದಾರೆ. ಒಕ್ಕೂಟದ ಪದಾಧಿಕಾರಿಗಳು: ಕಾಮಾಕ್ಷಿ (ಅಧ್ಯಕ್ಷೆ), ನೀಲಮ್ಮ ಬಸವೇಶ್ವರ ನಗರ (ಉಪಾಧ್ಯಕ್ಷೆ), ಸುನೀತಾ ಗೋವಿಂದಪ್ಪ (ಕಾರ್ಯದರ್ಶಿ), ಶಿವಮ್ಮ (ಸಹ ಕಾರ್ಯದರ್ಶಿ), ಶಶಿಕಲಾ (ಖಜಾಂಚಿ), ಈರಮ್ಮ, ರಾಜೇಶ್ವರಿ, ಶಿವಮ್ಮ, ಲಕ್ಷ್ಮೀ, ರೇಣುಕಾ, ಅನ್ನಪೂರ್ಣ ಕಾರ್ಯಕಾರಿ ಮಂಡಳಿ ಸದಸ್ಯರಾಗಿ ಆಯ್ಕೆಯಾದರು. ಒಕ್ಕೂಟದ ರಾಜ್ಯ ಕಾರ್ಯದರ್ಶಿ ರೇಣುಕಾ ಗಜಪೂರ, ಮಾನವ ಹಕ್ಕುಗಳ ಆಯೋಗದ ಕಲ್ಯಾಣ ಕರ್ನಾಟಕ ವಿಭಾಗದ ಅಧ್ಯಕ್ಷೆ ಡಾ. ಆರ್. ಈರಮ್ಮ, ಜಿಲ್ಲಾ ಘಟಕದ ಎ.ಹುಲಗಪ್ಪ, ಎ.ಎಲ್. ತಿಮ್ಮಣ್ಣಉಪಸ್ಥಿತರಿದ್ದರು.

# ಬೆಳಗಾವಿ ದಕ್ಷಿಣ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಭಾರೀ ಬೆಂಬಲ

## ಕ್ಷೇತ್ರಾದ್ಯಂತ ಪ್ರಚಾರ ಕೈಗೊಂಡ ಲಕ್ಷ್ಮೀ ಹೆಬ್ಬಾಳಕರ್, ಮೃಣಾಲ ಹೆಬ್ಬಾಳಕರ್

**ಬೆಳಗಾವಿ :** ಬೆಳಗಾವಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಪರ ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಭಾರೀ ಬೆಂಬಲ ವ್ಯಕ್ತವಾಗಿದೆ. ಭಾನುವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಜೊತೆಯಲ್ಲಿ ದಕ್ಷಿಣ ಕ್ಷೇತ್ರದ ವಿವಿಧ ಭಾಗಗಳಲ್ಲಿ ಪ್ರಚಾರ ನಡೆಸಿದರು. ಕೋರೆ ಗಲ್ಲಿ, ವಡಗಾವಿ, ಮಜಗಾವಿ, ಆನಗೋಳ, ಶಹಾಪುರ, ಖಾಸಬಾಗ, ಸಂಭಾಜಿ ನಗರ, ಕಪಿಲೇಶ್ವರ ಕಾಲೋನಿ ಮೊದಲಾದ ಪ್ರದೇಶದಲ್ಲಿ ಪ್ರಚಾರ ನಡೆಸಿದರು.

ಬಿರು ಬಿಸಿಲಿನಲ್ಲೂ ಸಾರ್ವಜನಿಕರು ಹೊರಗೆ ಬಂದು ತಮ್ಮ ಬೆಂಬಲ ವ್ಯಕ್ತಪಡಿಸಿದರು.



ಪಕ್ಷ ಭೇದ ಮರೆತು ಹಲವಾರು ಸ್ಥಳೀಯ ಮುಖಂಡರು ಪ್ರಚಾರದಲ್ಲಿ ಭಾ-ಗಿಯಾದರು. ಈ ಬಾರಿ ನಾವೆಲ್ಲ ಪಕ್ಷಭೇದ ಮರೆತು ಕಾಂಗ್ರೆಸ್ ಬೆಂಬಲಿಸುತ್ತೇವೆ. ಗ್ಯಾರಂಟಿ ಯೋಜನೆಗಳಿಂದ ನಮಗೆ ಬಹಳಷ್ಟು ಲಾಭವಾಗಿದೆ. ಸ್ಥಳೀಯ ಅಭ್ಯರ್ಥಿಯಾಗಿರುವ ಮೃಣಾಲ ಹೆಬ್ಬಾಳಕರ್ ಅವರಿಗೆ ನಾವು ಬೆಂಬಲ ನೀಡುತ್ತೇವೆ ಎಂದು ಜನರು ಅಭಯ ನೀಡಿದರು.

ವಡಗಾವಿಯ ನೇಕಾರ ಸಮಾಜದ ಹಿರಿಯರಾದ ಭೀಮಶಿ ಪಾತಲಿ ಸೇರಿದಂತೆ ಅನೇಕ ಪ್ರಮುಖರ ಮನೆಗಳಿಗೆ ಸಹ ಸೌಹಾರ್ದಯುತ ಭೇಟಿ ನೀಡಿದರು. ಕಾಂಗ್ರೆಸ್ ಪಕ್ಷದ ಸ್ಥಳೀಯ ಮುಖಂಡರು ಸಹ ಪ್ರಚಾರದುದ್ದಕ್ಕೂ ಪಾಲ್ಗೊಂಡರು.

ಇದೇ ವೇಳೆ, ಟಿಳಕವಾಡಿಯಲ್ಲಿರುವ ಸಿಖ್ ಧರ್ಮದ ಸಧ್ ಸಂಗತ್ ಗುರುದ್ವಾರ-ಕ್ಕೆ ಭೇಟಿ ನೀಡಿ, ಸಿಖ್ ಧರ್ಮದ ಸಂಪ್ರದಾಯದಂತೆ ನಡೆದ ಪ್ರಾರ್ಥನೆಯಲ್ಲಿ ಲಕ್ಷ್ಮೀ ಹೆಬ್ಬಾಳಕರ್ ಹಾಗೂ ಮೃಣಾಲ ಹೆಬ್ಬಾಳಕರ್ ಭಾಗಿಯಾದರು. ಕ್ಷೇತ್ರ ವ್ಯಾಪ್ತಿಯಲ್ಲಿರುವ ಮಹಾತ್ಮರ ಪುತ್ಥಳಿಗಳಿಗೂ ಮೃಣಾಲ ಹೆಬ್ಬಾಳಕರ್ ಗೌರವಾರ್ಪಣೆ ಮಾಡಿದರು.

# ಪರಿಶಿಷ್ಟ ವರ್ಗ ಅಲ್ಲದವರಿಗೆ ಜಾತಿ ಪ್ರಮಾಣ ಪತ್ರ ಕೊಡಬಾರದು: ವಾಲ್ಮೀಕಿ ಸಂಘ ಆಗ್ರಹ

**ಕೊಪ್ಪಳ :** ಕರ್ನಾಟಕ ರಾಜ್ಯದ ಉಚ್ಚ ನ್ಯಾಯಾಲಯ ಬೆಂಗಳೂರು ರಿಟ್ ಪಿಟಿಷನ್ 13777/23 ರಡಿ ನೀಡಿರುವ ಮಧ್ಯಂತರ ಆದೇಶ ದಿನಾಂಕ; 21.3.2021 ಅನ್ನು ಜಾರಿ ಮಾಡುವ ಕುರಿತು ಜಿಲ್ಲಾಧಿಕರಿಗಳಿಗೆ ಅಪರ ಜಿಲ್ಲಾಧಿಕಾರಿಗಳ ಮೂಲಕ ಕರ್ನಾಟಕ ರಾಜ್ಯ ವಾಲ್ಮೀಕಿ ಮಹಾಸಭಾದಿಂದ ಮನವಿ ಸಲ್ಲಿಸಲಾಯಿತು.

ಕರ್ನಾಟಕ ರಾಜ್ಯದ ಅನೇಕ ಜಿಲ್ಲೆಗಳಲ್ಲಿ ನಕಲಿ ಜಾತಿ ಪ್ರಮಾಣ ಪತ್ರಗಳ ಹಾವಳಿ ವಿಪರೀತವಾಗಿದ್ದು ಇಂತಹ ಪ್ರಕರಣಗಳ ಬಗ್ಗೆ ಕೂಡಲೇ ಕ್ರಮ ತೆಗೆದುಕೊಳ್ಳಬೇಕೆಂದು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿತ್ತು. ಆದರೆ ನಾವು ನೀಡಿದ್ದ ಮನವಿ ಮೇಲೆ ಜಿಲ್ಲಾಧಿಕಾರಿಗಳಾಗಲಿ/ ತಹಸೀಲ್ದಾರರಾಗಲಿ ಕ್ರಮ ತೆಗೆದುಕೊಳ್ಳದೇಯಿರುವುದರಿಂದ ಸಾವಿರಾರು ಕೊಟ್ಟಿ ಜಾತಿ ಪ್ರಮಾಣ ಪತ್ರಗಳು ವಿತರಣೆಯಾಗಿ ನೈಜ ಪರಿಶಿಷ್ಟ ವರ್ಗದವರಿಗೆ ಸಾಂವಿಧಾನಿಕವಾಗಿ ಲಭ್ಯವಾಗಬೇಕಿದ್ದ ಸೌಲಭ್ಯಗಳು ಅನ್ಯರ ಪಾಲಾಗಿರುವುದನ್ನು ಗಮನಿಸಲಾಗಿದ್ದು ಬೇರೆ ದಾರಿಯಿಲ್ಲದೆ ಉಚ್ಚನ್ಯಾಯಾಲಯದ ಮೊರೆ ಹೋಗಲಾಗಿತ್ತು. ಕರ್ನಾಟಕ ಉಚ್ಚನ್ಯಾಲಯವು ಡಬ್ಲ್ಯುಪಿ 13777/23 ರಲ್ಲಿ ದಿನಾಂಕ: 21.3.2024 ರಂದು ಮಧ್ಯಂತರ ತೀರ್ಪು ನೀಡಿದ್ದು ಅದರ ಪ್ರತಿಯನ್ನು ಸಹ ಲಗತ್ತಿಸಿ ತುರ್ತಾಗಿ ಕ್ರಮವಹಿಸಿ ವಾಲ್ಮೀಕಿ ನಾಯಕ ಉಪ ಪಂಗಡಗಳಾದ ನಾಯಕ ಪರಿವಾರ ಮತ್ತು ನಾಯಕ ತಳವಾರ ಹೊರತುಪಡಿಸಿ ಬೇರೆ ಜಾತಿಗಳಲ್ಲಿ ಬರುವ ಪರಿವಾರ ಮತ್ತು ತಳವಾರ ಜಾತಿಗಳಿಗೆ ಪರಿಶಿಷ್ಟ ವರ್ಗ ಪ್ರಮಾಣ ಪತ್ರ ನೀಡಿರುವದನ್ನು ಹಿಂಪಡಿಯಬೇಕು ಮತ್ತು ಯಾವುದೇ ಕಾರಣಕ್ಕೂ ಮುಂದೆ ಅಂತಹ ಪತ್ರಗಳ ವಿತರಣೆ ಆಗದಂತೆ ಎಚ್ಚರವಹಿಸಬೇಕು ಎಂದು ಮನವಿ ಮಾಡಿದರು. ಕರ್ನಾಟಕ ಉಚ್ಚನ್ಯಾಲಯದ ಆದೇಶದಂತೆ ಕೂಡಲೆ ಕ್ರಮ ತೆಗೆದುಕೊಂಡು ವಾಮ ಮಾರ್ಗದಿಂದ ನೈಜ ಪರಿಶಿಷ್ಟ ವರ್ಗಕ್ಕೆ ಸೇರಿಲ್ಲದವರು ಈಗಾಲೇ ತೆಗೆದುಕೊಂಡಿರುವ ಕೊಟ್ಟಿ ಜಾತಿ ಪತ್ರಗಳನ್ನು ಕೂಡಲೇ ವಜಾ ಮಾಡಬೇಕು. ಹಾಗೂ ಕರ್ನಾಟಕ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಇತರೆ ಹಿಂದುಳಿದ ವರ್ಗ (ನೇಮಕಾತಿಗಳಲ್ಲಿ ಇತರೆ ಮೀಸಲಾತಿ) ಅಧಿನಿಯಮ,1990 ಮತ್ತು ಅದರಡಿ ಬರುವ ನಿಯಮಗಳಡಿ ಕ್ರಮ ತೆಗೆದುಕೊಂಡು ತಪ್ಪಿತಸ್ಥರ ಮೇಲೆ ಕ್ರಮ ತೆಗೆದುಕೊಳ್ಳಲು ಹಾಗೂ ಸಾಂವಿಧಾನಿಕವಾಗಿ ಲಭ್ಯವಿರುವ ಸೌಲಭ್ಯಗಳು ನೈಜ ಪರಿಶಿಷ್ಟ ವರ್ಗದವರಿಗೆ ಸಿಕ್ಕಿ ಅವರ ಅಭಿವೃದ್ಧಿಗೆ ಅನುಕೂಲ ಮಾಡಿಕೊಡಲುಕೋರಿದೆ.



ಈ ಸಂದರ್ಭದಲ್ಲಿ ವಾಲ್ಮೀಕಿ ಗುರುಪೀಠದ ಧರ್ಮದರ್ಶಿ ರಾಮಣ್ಣ ಕಲ್ಲನವರ, ಕಾಂಗ್ರೆಸ್ ಎಸ್.ಟಿ. ಘಟಕ ತಾಲೂಕ ಅಧ್ಯಕ್ಷ ಮಂಜುನಾಥ ಜಿ. ಗೊಂಡಬಾಳ, ಜಿಲ್ಲಾ ಸಂಘದ ಪ್ರಧಾನ ಕಾರ್ಯದರ್ಶಿ ಶಿವಮೂರ್ತಿ ಗುತ್ತೂರ, ರಾಮಣ್ಣ ಬೆಳವಿನಾಳ, ರಮೇಶ ಚೌಡಕಿ, ಬಸವರಾಜ, ಚನ್ನಪ್ಪ, ಹನುಮಂತಪ್ಪ, ಈರಪ್ಪ ನಾಯಕ, ಉಮೇಶ ನಾಯಕ ಫಕೀರಪ್ಪ ನಾಯಕ, ಕೆಂಚಪ್ಪ ತಳವಾರ ಬೆಟಗೇರಿ, ಮಹೇಶ ನಾಯಕ,ಪಂಪಣ್ಣಇತರರುಇದ್ದರು.

# ಕೆಂಪು ಮೆಣಸಿಕಾಯಿಗೆ ಬೆಂಬಲ ಬೆಲೆ ನೀಡಿ ಖರಿಧಿಸುವಂತೆ ರೈತ ಸಂಘ ಆಗ್ರಹ




**ವಿಜಯಪುರ :** ಜಿಲ್ಲೆಯಲ್ಲಿ ಪ್ರತಿವರ್ಷ ಮುಂಗಾರಿನಲ್ಲಿ 13000 ಹೆಕ್ಟರ್ ಹಾಗೂ ಹಿಂಗಾರಿನಲ್ಲಿ ಸುಮಾರು 3500 ಹೆಕ್ಟರ್ ಕೆಂಪು ಮೆಣಸಿನಕಾಯಿಯನ್ನು ಬೆಳೆಯುತ್ತಿದ್ದು, ಸಾಕಷ್ಟು ಹಣ ಹಾಗೂ ಸಮಯ ಕೊಟ್ಟು ಕೂಸಿನಂತೆ ಜೋಪನಮಾಡಿ ಬೆಳೆದ ಬೆಳೆಗೆ ಈಗ ಬೆಲೆ ಇಲ್ಲದೇ ರೈತರು ಸಂಕಷ್ಟ ಪಡುತ್ತಿದ್ದಾರೆ, ಇದಕ್ಕೆ ಸೂಕ್ತ ಮಾರುಕಟ್ಟೆ ಕಲ್ಪಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಜಿಲ್ಲಾಧಿಕಾರಿಗಳಾದ ಟಿ. ಬೂಬಾಲನ ಅವರಿಗೆ ಮನವಿ ಸಲ್ಲಿಸಿ ಸರಕಾರದಿಂದ ಬೆಂಬಲ ಬೆಲೆ ನೀಡಿ ಖರಿಧಿಸಬೇಕೆಂದು ಆಗ್ರಹಿಸಿದರು.

ಈ ವೇಳೆ ಜಿಲ್ಲಾಧ್ಯಕ್ಷರಾದ ಸಂಗಮೇಶ ಸಗರ ಮಾತನಾಡುತ್ತಾ ಕಳೆದ ಭಾರಿ ಕ್ವಿಂಟಾಲ ಮೆಣಸಿನಕಾಯಿಗೆ 30000 ರೂಗಳ ವರೆಗೆ ಖರಿಧಿಸಲಾಗಿತ್ತು, ಆದರೆ ಈಗ ಬೆಲೆ ಪಾತಾಳ ಸೇರಿದಂತಾಗಿದೆ ಈಗ ಕ್ವಿಂಟಾಲಗೆ 9000ದ ಆಚೆ ಈಚೆ ಕೇಳುತ್ತಿದ್ದಾರೆ, ಇದರಲ್ಲಿ ದಲ್ಲಾಳಿಗಳ ಕೈವಾಡದಿಂದಾಗಿ ರೈತರು ನಷ್ಟ ಅನುಭವಿಸುವಂತಾಗಿದೆ, ಇದರಿಂದ ರೈತರು ಖರ್ಚು ಮಾಡಿರುವುಷ್ಟು ಸಹ ಅವರ ಕೈಗೆ ಸಿಗುತ್ತಿಲ್ಲ, ಆದ್ದರಿಂದ ಕೂಡಲೇ ಸರಕಾರದಿಂದ ಬೆಂಬಲ ಬೆಲೆ ನೀಡಿ ಖರಿಧಿಸಬೇಕು, ರೈತರ ಪರವಾಗಿ ಸರಕಾರಗಳು ಇರಬೇಕು , ಕೂಡಲೇ ಸಂಬಂಧಿಸಿದ ಎ.ಪಿ.ಎಂ.ಸಿ ಹಾಗೂ ತೋಟಗಾರಿಕಾ ಇಲಾಖೆಯ ಅಧಿಕಾರಿಗಳೊಡನೆ ಚರ್ಚಿಸಿ ಸರಕಾರಕ್ಕೆ ಒಂದು ಸೂಕ್ತ ವರದಿ ಕಳುಹಿಸಿ ಒಳ್ಳೆಯ ಬೆಲೆಯೊಂದಿಗೆ ಮೆಣಸಿನಕಾಯಿ ಖರಿಧಿಸಬೇಕು ಎಂದು ಆಗ್ರಹಿಸಿದರು. ಈ ವರ್ಷ ಸರಿಯಾಗಿ ಮಳೆ ಬಾರದೇ ಸಾಲ ಸೋಲ ಮಾಡಿರುವ ರೈತನಿಗೆ ಮುಂಗಾರು ಹಾಗೂ ಹಿಂಗಾರು ಮಳೆ ಆಗದೇ ಯಾವ ಬೆಳೆ ಕೂಡಾ ಸರಿಯಾಗಿ ಬೆಳೆಯದೇ ಆತ್ಮಹತ್ಯೆ ಅಂತಹ ಕೆಟ್ಟ ಘಟನೆಗಳು ನಡೆದಿರುವುದು ಕಂಡುಬರುತ್ತಿವೆ, ಈಗಾಗಲೇ ಹಿಂಗಾರು ಸಹ ಸಂಪೂರ್ಣ ಕೈಕೊಟ್ಟಿರುವುದರಿಂದ ರೈತರಿಗೆ ಪರಿಹಾರ ಹಾಗೂ ಫಸಲ ಭೀಮಾ ಯೋಜನೆಯಡಿ ವಿಮೆ ತುಂಬಿರುವ ರೈತರಿಗೂ ವಿಮಾ ಪರಿಹಾರ ಕೊಡಬೇಕು ಎಂದರು, ವಿಮೆಯಲ್ಲಿ ಅವ್ಯವಹಾರ ನಡೆಯುತ್ತಿರುವ ಕುರಿತು ಮಾನ್ಯ ಜಿಲ್ಲಾಧಿಕಾರಿಗಳು ಸೂಕ್ತ ತನಿಖೆ ಮಾಡಿ ನಷ್ಟಗೊಂಡ ರೈತರಿಗೆ ಪರಿಹಾರ ನೀಡುವಂತೆ ಆದೇಶಿಸಬೇಕು ಎಂದರು.

ಈ ವೇಳೆ ಜಿಲ್ಲಾ ಸಂಚಾಲಕರಾದ ರಾಮನಗೌಡ ಪಾಟೀಲ(ಬ್ಯಾಲ್ಯಾಳ), ಸಹಸಂಚಾಲಕರಾದ ಮಹಾಂತೇಶವ ಮಮದಾಪುರ, ತಾಲೂಕಾ ಉಪಾಧ್ಯಕ್ಷರಾದ ಮಹಾದೇವಪ್ಪ ತೇಲಿ, ತಾ.ಪ್ರಧಾನ ಕಾರ್ಯದಶಿಗಳಾದ ಮಲ್ಲಿಕರ್ಜುನ ಗೋಡೆಕಾರ, ವಿಜಯಪುರ ನಗರ ಘಟಕದ ಅಧ್ಯಕ್ಷರಾದ ಸಂಗಪ್ಪ ಚಲವಾದಿ, ಮುಖಂಡರಾದ ತಪ್ಪಣ್ಣ ನಾಟಿಕಾರ, ಪ್ರಭು ಕಾರಜೋಳ, ಮಹಾಂತೇಶ ಮಹಾಂತಮಠ ಇದ್ದರು.

# ಅಪರಿಚಿತ ವ್ಯಕ್ತಿ ಶವ ಪತ್ತೆ

**ಬೆಳಗಾವಿ :** ಘಟಪ್ರಭಾ ರೈಲು ನಿಲ್ದಾಣ ಯಾರ್ಡ ಹೊಸ ನೀರಿನ ಟ್ಯಾಂಕ ಹತ್ತಿರ ಮಾ. 30 ರಂದು ಅನಾರೋಗ್ಯದಿಂದ ಮೃತಪಟ್ಟ ಅಪರಿಚಿತ ವ್ಯಕ್ತಿ ಶವ ಪತ್ತೆಯಾಗಿದೆ.

ಮೃತನ ಚಹರೆ : ವಯಸ್ಸು ಸುಮಾರು 55-60 ವರ್ಷ ಎಂದು ಅಂದಾಜಿಸಲಾಗಿದೆ.

5-6 ಎತ್ತರ, ಕಪ್ಪು ಮೈ ಬಣ್ಣ, ಮೈಯಿಂದ ತಳ್ಳಗೆ, ಕೋಲು ಮುಖ, ದುಂಡ ಮೂಗು, ಮಿಸಿ-ದಾಡಿ ಬಿಟ್ಟಿರುತ್ತಾನೆ, ಬಿಳಿ ಗೇರೆ ಮತ್ತು ಬೂದು ಬಣ್ಣ ಮಿಶ್ರಿತ ಫುಲ್ ಶರ್ಟ, ಹಾಪ್ ಪ್ಯಾಂಟ್ ಧರಿಸಿರುತ್ತಾನೆ.

ಮೃತನ ವಾರಸುದಾರರು ಪತ್ತೆಯಾದರೆ ಬೆಳಗಾವಿ ರೈಲ್ವೆ ಪೊಲೀಸ್ ದೂ. ಸಂಖ್ಯೆ : (0831) 2405273, ಪಿಎಸ್ಐ ದೂ ಸಂಖ್ಯೆ : 9480802127 ಅಥವಾ ರೈಲು ಪೊಲೀಸ್ ನಿಯಂತ್ರಣ ಕೊಠಡಿ ದೂ ಸಂಖ್ಯೆ:(080) 22871291 ಸಂಪರ್ಕಿಸಬೇಕು ಎಂದು ಬೆಳಗಾವಿ ರೈಲ್ವೆ ಪೊಲೀಸ್ ಠಾಣೆ ಆರಕ್ಷಕ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಡಿಯು ನೀರು ಮತ್ತು ನೈರ್ಮಲ್ಯ ಸಮಿತಿ ಸಭೆಯಲ್ಲಿ ಸಿಇಓ ಸೂಚನೆ

## ಕುಡಿಯುವ ನೀರಿನ ಪೂರೈಕೆಗೆ ಪ್ರಥಮ ಆದ್ಯತೆ ನೀಡಿ: ರಾಹುಲ್ ರತ್ನಂ ಪಾಂಡೆಯ

**ಕೊಪ್ಪಳ :** ಕೊಪ್ಪಳ ಜಿಲ್ಲೆಯಲ್ಲಿ ಸಮರ್ಪಕ ಕುಡಿಯುವ ನೀರಿನ ಪೂರೈಕೆಗೆ ಪ್ರಥಮ ಆದ್ಯತೆ ನೀಡುವಂತೆ ಕ್ರಮ ಕೈಗೊಳ್ಳಿ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೆಯ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್‌ನ ಸಮಿತಿಯ ಸಭಾಂಗಣದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಕುಡಿಯುವ ನೀರು ಮತ್ತು ನೈರ್ಮಲ್ಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆ ಆಗದಂತೆ ನೋಡಿಕೊಳ್ಳಿ. ಈಗಾಗಲೇ ಬೇಸಿಗೆ ಪ್ರಾರಂಭವಾಗಿದ್ದು, ತಾಪಮಾನ ಶೇ.40 ಸೆಲ್ಸಿಯಸ್ ನಷ್ಟಿದೆ. ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವ ಗ್ರಾಮಗಳಲ್ಲಿ ಹೊಸ ಬೋರ್ವೆಲ್‌ಗಳನ್ನು ಕೊರೆಯಿಸಲು ಕ್ರಮ ವಹಿಸಿ. ಅಲ್ಲದೇ ಖಾಸಗಿ ಬೋರ್ವೆಲ್‌ಗಳನ್ನು ಬಾಡಿಗೆ ಆಧಾರದ ಮೇಲೆ ಪಡೆದು ನೀರು ಪೂ-ರೈಕೆ ಮಾಡಬೇಕು. ಖಾಸಗಿ ಬೋರ್ವೆಲ್ ಲಭ್ಯವಿಲ್ಲದ ಕಡೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಬೇಕು. ಈಗಾಗಲೇ ಚಾಲ್ತಿಯಲ್ಲಿರುವ ಬೋರ್ವೆಲ್‌ಗಳ ಸುಸ್ಥಿತಿಯನ್ನು ಪರಿಶೀಲಸಬೇಕು. ಯಾವುದೇ ರೀತಿಯ ಸಣ್ಣಪುಟ್ಟ ದುರಸ್ಥಿ ಮಾಡಿಸಬೇಕಾಗಿದ್ದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.




ಜಿಲ್ಲೆಯಲ್ಲಿ ಕುಡಿಯುವ ನೀರು ಪೂರೈ-ಕೆಗಾಗಿ ಹೊಸ ಬೋರ್ವೆಲ್ ಕೊರೆಯಿಸಲು ಅಗತ್ಯವಿರುವ ಗ್ರಾಮಗಳ ಪಟ್ಟಿಯನ್ನು ತಯಾರಿಸಿ 15 ದಿನಗಳೊಳಗಾಗಿ ಸಲ್ಲಿಸಿದ್ದಲ್ಲಿ ಹೊಸ ಬೋರ್ವೆಲ್ ಕೊರೆಯಿಸಲು ಅನುಮೋದನೆ ನೀಡಲಾಗುವುದು. ಹೊಸ ಬೋರ್ವೆಲ್‌ಗಳಿಗಾಗಿ ಸಲ್ಲಿಸುವ ಪ್ರಸ್ತಾವನೆಯಲ್ಲಿ ಬೋರ್ವೆಲ್ ಅವಶ್ಯವಿರುವ ಸ್ಥಳದ ಮಾಹಿತಿಯ ಜೊತೆಗೆ ನೀರು ಲಭ್ಯವಿರುವ ಕುರಿತು ಜಿಯೋಲಿಜಿಸ್ಟ್ ವರದಿ ನೀಡಬೇಕು. ಈ ವರದಿಯನ್ನು ಪರಿಶೀಲಿಸಿ ಅವಶ್ಯವಿದ್ದರೆ, ಹೊಸ ಬೋರ್ವೆಲ್ ಕೊರೆಯಿಸಲು ಅನುಮತಿ ನೀಡಲಾಗುವುದು. ವಿಫಲವಾದ ಬೋರ್ವೆಲ್‌ಗಳ ಸೂಕ್ತ ಮಾಹಿತಿ ನೀಡಬೇಕು. ಕೆಲವು ಬೋರ್ವೆಲ್‌ಗಳಲ್ಲಿ ಅಲ್ಪ ಪ್ರಮಾಣದಲ್ಲಿ ನೀರಿರುವ ಕಾರಣ ವಿಫಲ ಎಂದು ಕೈಬಿಡಲಾಗಿದ್ದು, ಅಂತಹ ಯಾವುದಾದರೂ ಬೋರ್ವೆಲ್ ಒಂದರಲ್ಲಿ ಹ್ಯಾಂಡ್ ಪಂಪ್ ಅಳವಡಿಸಿ ನೋಡಿ, ಹ್ಯಾಂಡ್ ಪಂಪ್ ಮೂಲಕ ಜನರಿಗೆ ನೀರು ದೊರೆತರೆ ಇದೇ ಪ್ರಯತ್ನವನ್ನು ಇತರ ಸ್ಥಳಗಳಲ್ಲಿಯೂ ಅನುಸರಿಸಲು ಕ್ರಮ ಕೈಗೊಳ್ಳಬೇಕು ಎಂದರು.

ಜಿಲ್ಲೆಯ ನಗರ ಪ್ರದೇಶದ 117 ಮತ್ತು ಗ್ರಾಮೀಣ ಭಾಗದ 560 ಅಂಗನವಾಡಿ ಕೇಂದ್ರಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದಾಗಿ ಮಾಹಿತಿ ಇದ್ದು, ನಗರ ಪ್ರದೇಶಗಳ ಅಂಗನವಾಡಿಗಳಿಗೆ ಯೋಜನಾ ನಿರ್ದೇಶಕರು ಜಿಲ್ಲಾ ನಗರಾಭಿವೃದ್ಧಿ ಕೋಶ, ಗ್ರಾಮೀಣ ಭಾಗದ ಅಂಗನವಾಡಿ ಕೇಂದ್ರಗಳಿಗೆ ಗ್ರಾಮೀಣ ಕುಡಿಯುವ ನೀರಿನ ಇಲಾಖೆಯ ಅಧಿಕಾರಿಗಳು ನೀರಿನ ಸೌಲಭ್ಯ ಕುಡಿಯುವ ನೀರಿನ ಕಲ್ಪಿಸಬೇಕು ಎಂದರು.

ಜಿಲ್ಲೆಯ ಎಲ್ಲಾ ಶಾಲೆಗಳಲ್ಲಿಯೂ ಸಹ ಕುಡಿಯುವ ನೀರಿನ ವ್ಯವಸ್ಥೆ ಬಗ್ಗೆ ಶಿಕ್ಷಣ ಇಲಾಖೆ ಅಧಿಕಾರಿಗಳು ಪರಿಶೀಲಿಸಿ ವರದಿ ಸಲ್ಲಿಸಬೇಕು. ಈ ಹಿನ್ನೆಲೆಯಲ್ಲಿ ಯಾವುದೇ ರೀತಿಯ ಸಮಸ್ಯೆ ಕಂಡುಬಂದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಹಾಗೂ ಸಂಬಂಧಪಟ್ಟ ಅಧಿಕಾರಿಗಳು ತ್ವರಿತವಾಗಿ ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ಜಿಲ್ಲೆಯ ಎಲ್ಲಾ ಶುದ್ಧ ಕುಡಿಯುವ ನೀರಿನ ಘಟಕಗಳಲ್ಲಿ ಸಮರ್ಪಕವಾಗಿ ನೀರು ಸಿಗಬೇಕು. ನೀರಿನ ಪೂರೈ-ಕೆ ಆಗದೆ ಇರುವ ಶುದ್ಧ ಕುಡಿಯುವ ನೀರಿನ ಘಟಕ ಗಳಿಗೆ 7 ದಿನಗಳೊಳಗಾಗಿ ನೀರು ಸಂಪರ್ಕ ಒದಗಿಸಿ ಪೂರ್ಣ ಪ್ರಮಾಣದಲ್ಲಿ ಕಾರ್ಯನಿರ್ವಹಿಸಬೇಕು. ಪ್ರತಿ ತಾಲ್ಲೂಕಿಗೆ ಎರಡರಂತೆ ನೀರಿನ ಟ್ಯಾಂಕರ್ ವ್ಯವಸ್ಥೆಯನ್ನು ಆಯಾ ತಾ.ಪಂ ಅಧಿಕಾರಿಗಳು ಮಾಡಿಕೊಳ್ಳಬೇಕು. ಕುಡಿಯುವ ನೀರು ಪೂರೈಕೆ ಆಗುವ ಜಿಲ್ಲೆಯ ಬೋರ್ವೆಲ್‌ಗಳು, ಟ್ಯಾಂಕ್‌ಗಳು ಹಾಗೂ ಇತರ ನೀರಿನ ಸಂಗ್ರಹಗಳಲ್ಲಿ ಕ್ರಮೇಣವಾಗಿ ನೀರಿನ ಪರೀಕ್ಷೆಗಳನ್ನು ಮಾಡುವಂತೆ ಆರೋಗ್ಯ ಇಲಾಖೆಯು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳಾದ ಮಲ್ಲಪ್ಪ ತೊದಲಬಾಗಿ, ಜಿ.ಪಂ ಮುಖ್ಯ ಯೋಜನಾಧಿಕಾರಿಗಳಾದ ಡಿ.ಮಂಜುನಾಥ, ಜಂಟಿ ಕೃಷಿ ನಿರ್ದೇಶಕರಾದ ರುದ್ರೇಶಪ್ಪ ಟಿ.ಎಸ್ ಸೇರಿದಂತೆ ಕುಡಿಯು ನೀರು ಮತ್ತು ನೈರ್ಮಲ್ಯ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಗ್ಯಾರಂಟಿ ಜೊತೆಗೆ ಶಿವ-ರಾಮಯ್ಯ ವಾರಂಟಿ ಇದೆ: ಜ್ಯೋತಿ

**ಕೊಪ್ಪಳ :** ರಾಜ್ಯ ಕಾಂಗ್ರೆಸ್ ಸರಕಾರದ ಗ್ಯಾರಂಟಿ ಯೋಜನೆ ಬಡ ಮತ್ತು ಮಧ್ಯಮ ವರ್ಗಕ್ಕೆ ಆಸರೆಯಾಗಿದ್ದು ಗ್ಯಾರಂಟಿಯೊಂದಿಗೆ ಡಿ.ಕೆ. ಶಿವಕುಮಾರ ಮತ್ತು ಸಿದ್ದರಾಮಯ್ಯ ಅವರ ವಾರಂಟಿ ಇದೆ ಎಂದು ಜಿಲ್ಲಾ ಮಹಿಳಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ, ಗ್ಯಾರಂಟಿ ಪ್ರಾಧಿಕಾರ ಸದಸ್ಯರಾದ ಜ್ಯೋತಿ ಎಂ. ಗೊಂಡಬಾಳ ಹೇಳಿದರು.

ಅವರು ಭಾಗ್ಯನಗರ 6ನೇ ವಾರ್ಡಿನಲ್ಲಿ ಕಾಂಗ್ರೆಸ್ ಬಡಜನರಿಗಾಗಿ ಮಾಡಿರುವ ಅನ್ನಭಾಗ್ಯ, ಯುವನಿಧಿ, ಗೃಹಭಾಗ್ಯ, ಗೃಹಜ್ಯೋತಿ ಮತ್ತು ಶಕ್ತಿ ಯೋಜನೆಗಳ ಬಗ್ಗೆ ಅರಿವು ಮೂಡಿಸುವ ಮತ್ತು ಕಾಂಗ್ರೆಸ್ ಅಭ್ಯರ್ಥಿ ಕೆ. ರಾಜಶೇಖರ್ ಹಿಟ್ನಾಳ ಪರವಾಗಿ ಪ್ರಚಾರ ನಡೆಸಿ ಮಾತನಾಡಿದರು.

ಬಿಜೆಪಿ ಭ್ರಷ್ಟರು,

ಅಂದಾಭಿಮಾನ ಹಾಗೂ ಧರ್ಮದ ಮದ ಹಚ್ಚಿಕೊಂಡ ಜನ ಅದನ್ನು ಬಿಟ್ಟಿ ಭಾಗ್ಯ ಎಂದು ತೆಗಳುವ ಮೂಲಕ ಬಡಜನರಿಗೆ ವ್ಯಂಗ್ಯ ಮಾಡುತ್ತಿದ್ದಾರೆ, ಇಂತಹ ಒಂದು ಯೋಜನೆ ಮಾಡದೇ, ಉದ್ಯೋಗ ಕೊಡದೇ ದೇಶದ ಸಾಲವನ್ನು ಕೇವಲ ಹತ್ತು ವರ್ಷದಲ್ಲಿ ನಾಲ್ಕು ಪಟ್ಟು ಅಂ-ದರರೆ 70 ವರ್ಷದಲ್ಲಿ ಇದ್ದ 54 ಲಕ್ಷ ಕೋಟಿ ಸಾಲವನ್ನು 207 ಕೋಟಿಗೆ ತಂದು ನಿಲ್ಲಿಸಿದ ಕೀರ್ತಿ ಮೋದಿ ಸರಕಾರಕ್ಕೆ ಸಲ್ಲುತ್ತದೆ, ಅವರು ಹೇಳಿರುವ ಒಂದೂ ಯೋಜನೆಯಿಂದ ಜನರಿಗೆ ಅನುಕೂಲ ಆಗುವದಿಲ್ಲ, ಶ್ರೀಮಂತ ಕಾರ್ಪೋರೇಟ್ ಕುಳಗಳಿಗೆ ದಾಸರಾದ ಅವರಿಗೆ ಬಡವರ ಕಷ್ಟ ಅರ್ಥವಾಗುವದಿಲ್ಲ. ಯುವಜನರಿಗೆ ಕೆಲಸ ಇಲ್ಲದೇ ಪರದಾಡುವ ಸ್ಥಿತಿ ಇದೆ, ಉದ್ಯೋಗ ನಷ್ಟ ದೇಶದಲ್ಲಿ ಎಂದೆಂದಿಗಿಂತ ಅಧಿಕವಾಗಿದೆ.



ಬಿಜೆಪಿ ಅವರು ರಾಮಮಂದಿರ, ಪಾಕಿಸ್ತಾನ, ಮುಸ್ಲಿಂ ಎಂದು ಮತ ಕೇಳಲು ಬಂದರೆ ಸರಿಯಾಗಿ ಉತ್ತರಿಸಿ, ಕಾಂಗ್ರೆಸ್ ಕಟ್ಟಿದ ದೇಶವನ್ನು ಮಾರಾಟ ಮಾಡಿದ ಸುಳ್ಳು ದೇಶಭಕ್ತರನ್ನು ಸೋಲಿಸುವ ಮೂಲಕ ಪಾಠ ಕಲಿಸಿ, ದೇಶದ ಉಳಿವಿಗಾಗಿ ಕಾಂಗ್ರೆಸ್‌ಗೆ ಮತ ಕೊಡಿ ಎಂದು ಮನೆ ಮನೆಗೆ ತೆರಳಿ ವಿನಂತಿಸಿದರು.

ಪಟ್ಟಣ ಪಂಚಾಯಿತಿ ಮಾಜಿ ಸದಸ್ಯೆ, ಗ್ಯಾರಂಟಿ ಪ್ರಾಧಿಕಾರ ಸದಸ್ಯರಾದ ಸವಿತಾ ಗೋರಂಟ್ಲಿ ನೇತೃತ್ವವಹಿಸಿದ್ದರು. ಈ ಸಂದರ್ಭದಲ್ಲಿ ಮುಖಂಡರುಗಳಾದ ಮಂಜುನಾಥ ಗೊಂಡಬಾಳ, ಅಶೋಕ ಗೋರಂಟ್ಲಿ, ಯಶೋಧ ಮರಡಿ, ಸುಮಂಗಲಾ ನಾಯಕ್, ಶಿಲ್ಪಾ ಗುಡ್ಲಾನೂರ, ಜಯಶ್ರೀ, ಗವಿಸಿದ್ದಪ್ಪ ಹಂಡಿ, ಬೋರಮ್ಮ ಇತರರು ಇದ್ದರು.

# 2024 ದೇಶದ ಪ್ರಧಾನ ಸೇವಕ ಮೋದಿ ಆಯ್ಕೆ ಖಚಿತ ಕಡಾಡಿ




**ಮೂಡಲಗಿ :** 2024ರ ಲೋಕಸಭಾ ಚುನಾವಣೆ ದೇಶದ ಹಿತ ದೃಷ್ಟಿಯಿಂದ ಅತ್ಯಂತ ಮಹತ್ವವಾದದ್ದು. ಸಮಾಜದ ಕಟ್ಟಕಡೆಯ ವ್ಯಕ್ತಿಯ ಕಲ್ಯಾಣದೊಂದಿಗೆ ಜಗತ್ತಿನಲ್ಲಿ ದೇಶದ ಘನತೆ ಗೌರವವನ್ನು ಎತ್ತಿ ಹಿಡಿಯುವಂತ ದಿಟ್ಟ ನಿರ್ಧಾರಗಳನ್ನು ತೆಗೆದುಕೊಂಡ ಪ್ರಧಾನಿ ನರೇಂದ್ರಮೋದಿ ಅವರ ಬಿಜೆಪಿ ಸರ್ಕಾರವನ್ನು ಮತ್ತೊಮ್ಮೆ ಅಧಿಕಾರಕ್ಕೆ ತರುವ ಅನಿವಾರ್ತೆಯ ಬಗ್ಗೆ ಜನಜಾಗೃತಿಗೊಳಿಸಬೇಕಾದ ಜವಾಬ್ದಾರಿ ನಮ್ಮದಾಗಿದೆ ಎಂದು ರಾಜ್ಯಸಭಾ ಸಂಸದ ಈರಣ್ಣ ಕರಾಡಿ ಹೇಳಿದರು.

ಬೆಳಗಾವಿ ಲೋಕಸಭೆಯ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಅವರ ಕಲ್ಲೋಳಿ ಪಟ್ಟಣದ ನಿವಾಸಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಅವರು ಮಾತನಾಡಿದರು.

ಶತಮಾನಗಳ ಇತಿಹಾಸವುಳ್ಳ ಕಾಂಗ್ರೇಸ್ ಪಾರ್ಟಿ ಲೋಕಸಭಾ ಚುನಾವಣೆಗೆ ನಿಲ್ಲುವ ಸಮರ್ಥ ಕಾರ್ಯಕರ್ತರುಗಳನ್ನು ಬೆಳೆಸುವಲ್ಲಿ ವಿಫಲವಾಗಿದ್ದು ಅದರ ಪರಿಣಾಮ ಸಚಿವರುಗಳ ಮಕ್ಕಳಿಗೆ ಅಭ್ಯರ್ಥಿಗಳನ್ನಾಗಿ ಮಾಡುವ ಅನಿವಾರ್ಯತೆಗೆ ಸಿಲುಕಿರುವುದು ಕಾಂಗ್ರೇಸ್‌ನ ದಯನೀಯ ಸ್ಥಿತಿಯನ್ನು ತೋ–ರಿಸುತ್ತದೆ ಎಂದು ಹೇಳಿದರು.

ರಾಜ್ಯ ಸರ್ಕಾರದ ಗ್ಯಾರಂಟಿಗಳ ವೈಫಲ್ಯ, ರೈತರ ಸಮಸ್ಯೆಗಳ ಪರಿಹಾರಕ್ಕೆ ನಿರಾಸಕ್ತಿ, ಸಚಿವರುಗಳ ಭ್ರಷ್ಟಾಚಾರ, ಅಲ್ಪಸಂಖ್ಯಾತರ ತುಷ್ಟೀಕರಣ, ಬಹುಸಂಖ್ಯಾತರ ಹಿತವನ್ನು ಕಡೆಗಣಿಸುವ ಕಾಂಗ್ರೇಸ್ಸಿನ ನಡೆಯಿಂದಾಗಿ ಜನ ಬೇಸತ್ತು ಹೋಗಿದ್ದಾರೆ.

ಈ ಎಲ್ಲವುಗಳಿಗೆ ಪರಿಹಾರ ನರೇಂದ್ರ ಮೋದಿ ಅವರನ್ನು ಮತ್ತೊಮ್ಮೆ ಕೇಂದ್ರದಲ್ಲಿ ಪ್ರತಿಷ್ಠಾಪಿಸುವದೇನಮ್ಮೆಲ್ಲರಗುರಿಯಾಗಬೇಕು ಎಲ್ಲ ಸಮಸ್ಯೆಗಳಿಗೂ ಮೋದಿ ಗ್ಯಾರಂಟಿಯೇ ಪರಿಹಾರವಾಗಿದೆ ಎಂದರು.

ಲೋಕಸಭಾ ಚುನಾವಣೆ ಪ್ರಜಾಪ್ರಭುತ್ವದ ಹಬ್ಬವಿದ್ದಂತೆ, ಈ ಹಬ್ಬದಲ್ಲಿ ಎಲ್ಲ ಜನತೆಯು ಪಾಲ್ಗೊಳ್ಳುವ ಮೂಲಕ ಸದೃಢ ಸರ್ಕಾರದ ಆಯ್ಕೆಗಾಗಿ ಸಂಕಲ್ಪ ಮಾಡಬೇಕೆಂದು ಜನತೆಗೆ ವಿನಂತಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯ ಉಪಾಧ್ಯಕ್ಷ ಅನಿಲ ಬೆನಕೆ, ಜಿಲ್ಲಾಧ್ಯಕ್ಷ ಸುಭಾಸ ಪಾಟೀಲ, ರಾಜ್ಯ ಯುವಮೋರ್ಚಾ ಉಪಾಧ್ಯಕ್ಷ ಈರಣ್ಣ ಅಂಗಡಿ, ವಿಜಯ ಗುಡದರಿ ಪ್ರಮುಖರಾದ ಪ್ರಕಾಶ ಮಾದರ, ಶ್ರೀಶೈಲ ಪೂಜಾರಿ, ಮಾರುತಿ ತೋಳಮರಡಿ, ಶ್ರೀಕಾಂತ ಕೌಜಲಗಿ, ಪ್ರಭು ಕಡಾಡಿ, ಹಣಮಂತ ಸಂಗಟಿ, ಬಸವರಾಜ ಹಿಡಕಲ್, ಡಾ. ಬಿ.ಎಂ. ಪಾಲಭಾಂವಿ, ಮಲ್ಲಪ್ಪ ನೇಮಗೌಡರ, ಈರಪ್ಪ ಢವಳೇಶ್ವರ, ಅಡಿವೆಪ್ಪ ಕುರಬೇಟ, ಮಹಾದೇವ ಮಸರಗುಪ್ಪಿ, ಬಸವರಾಜ ಗಾಡವಿ, ರಾಯಪ್ಪ ಬಾಣಸಿ, ಬಸವರಾಜ ನಿಡಗುಂದಿ, ಸುನೀಲ ಈರೇಶನವರ, ಭಗವಂತ ಪಾಟೀಲ, ಕೆಂಪಣ್ಣ ಗಡಹಿಂಗ್ಲೆಜ್, ಪುಂಡಲಿಕ ಅರಭಾಂವಿ, ಭಗವಂತ ಧರ್ಮಟ್ಟಿ, ಲಗಮಣ್ಣ ಕುಳ್ಳೂರ, ಸಿದಾರ್ಥ ಅಥಣಿ, ಆನಂದ ಮೂಡಲಗಿ, ರಾಮಪ್ಪ ಕಾಪಸಿ, ಬಾಳೇಶ ಸಕ್ರೆಪ್ಪಗೊಳ, ಯಮನಪ್ಪ ಬಾಗಾಯಿ, ದಶಗೀರ ಕಮತನೂರ ಸೇರಿದಂತೆ ಸ್ಥಳೀಯ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

# ಕಾಲುಬಾಯಿ ರೋಗ ಲಸಿಕಾ ಅಭಿಯಾನಕ್ಕೆ ಚಾಲನೆ

## 'ಜಾನುವಾರುಗಳಿಗೆ ಕಾಲುಬಾಯಿ ರೋಗ ಲಸಿಕೆ ಹಾಕಿಸಿ ರೋಗ ಮುಕ್ತಗೊಳಿಸಬೇಕು'



**ಮೂಡಲಗಿ :** 'ಜಾನುವಾರುಗಳಿಗೆ ಕಾಲುಬಾಯಿ ರೋಗ ಲಸಿಕೆಯನ್ನು ಹಾಕಿಸಿ ರೋಗಮುಕ್ತಗೊಳಿಸಬೇಕು' ಎಂದು ಮೂಡಲಗಿಯ ಪಶು ಆಸ್ಪತ್ರೆಯ ಸಹಾಯಕ ನಿರ್ದೇಶಕಡಾ. ಮೋಹನ ಕಮತಅವರು ಹೇಳಿದರು.

ಇಲ್ಲಿಯ ಶ್ರೀ ಶಿವಬೋಧರಂಗ ಮಠದ ಗೋವು ಶಾಲೆಯ ಹಸುವಿಗೆ ಕಾಲುಬಾಯಿ ರೋಗ ಲಸಿಕೆಯನ್ನು ನೀಡುವುದರ ಮೂಲಕತಾಲ್ಲೂಕಿನಲ್ಲಿ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದಅವರು ರೋಗಗಳಿಂದ ಪೂರ್ಣ ಸುರಕ್ಷತೆಗಾಗಿ ಮೂರು ತಿಂಗಳ ಮೇಲ್ಪಟ್ಟ–ಎಲ್ಲಾ ಜಾನುವಾರುಗಳಿಗೆ ಲಸಿಕೆಯನ್ನು ಹಾಕಿಸಬೇಕು ಎಂದರು.

ಮೂಡಲಗಿತಾಲ್ಲೂಕಿನಲ್ಲಿ ಸದ್ಯ 88 ಸಾವಿರು ಜಾನುವಾರುಗಳು ಇದ್ದು 90 ಸಾವಿರ ಲಸಿಕೆ ಸರಬುರಾಜುಇದೆ.60 ಲಸಿಕೆದಾರರ 12 ತಂಡಗಳ ಮೂಲಕ ಏ.30ರ ವರೆಗೆ ಲಸಿಕಾ ಅಭಿಯಾನಇರುವುದು.ಲಸಿಕೆ ದಾರರು ರೈತರ ಮನೆ, ಮನೆಗೆ ಭೇಟಿ ನೀಡಲಿದ್ದಾರೆ.ರೈತರು ಜಾನುವಾರಗಳಿಗೆ ಲಸಿಕೆಯನ್ನು ಕಡ್ಡಾಯವಾಗಿ ಹಾಕಿಸಿಕೊಂಡು ಅಭಿಯಾನವನ್ನು ಯಶಸ್ವಿಗೊಳಿಸಬೇಕು ಎಂದರು.

ಪಶು ಸಂಗೋಪನಾ ಇಲಾಖೆಯಪಾಲಿಕ್ಲನಿಕ್‌ಉಪನಿರ್ದೇಶಕಡಾ. ಎಂ.ಬಿ. ವಿಭೂತಿ ಮಾತನಾಡಿ ಮೂಡಲಗಿಯಲ್ಲಿ ಪ್ರತಿ ಬಾರಿಯು ಲಸಿಕೆ ಅಭಿಯಾನವು ಶೇ.95ರಷ್ಟು ಯಶಸ್ವಿಯಾಗುತ್ತಿದ್ದು, ಈ ಬಾರಿ ಶೇ.100ರಷ್ಟು ಯಶಸ್ವಿಗೊಳಿಸುವಲ್ಲಿ ರೈತರು ಜಾನುವಾರುಗಳಿಗೆ ಲಸಿಕೆಯನ್ನು ತಪ್ಪದೆ ಹಾಕಿಸಿಕೊಳ್ಳಬೇಕು ಎಂದರು.

ಶ್ರೀ ಶಿವಬೋಧರಂಗ ಮಠದ ಪೀಠಾಧಿಪತಿ ಶ್ರೀಧರಬೋಧ ಸ್ವಾಮಿಜಿ ಗೋವು ಪೂಜೆ ಸಲ್ಲಿಸಿ, ಹಣ್ಣು ತಿನ್ನಿಸಿ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದಅವರು'ಕೃಷಿಗೆ ಮೂಲ ಅವಶ್ಯವಾಗಿರುವ ಪಶು ಸಂಪತ್ತುರಕ್ಷಣೆ ಮಾಡುವುದು ನಮ್ಮೆಲ್ಲರಆದ್ಯ ಕರ್ತವ್ಯವಾಗಬೇಕು. ಮನುಷ್ಯರುತಮ್ಮಆರೋಗ್ಯವನ್ನು ಹೇಗೆ ಕಾಳಜಿ ಮಾಡಿಕೋಳ್ಳುತ್ತೇವೆ ಹಾಗೆಯೇ ಜಾನುವಾರುಗಳ ಆರೋಗ್ಯವನ್ನು ಕಾಳಜಿವಹಿಸಬೇಕು. ಜಾನುವಾರುಗಳ ಚಿಕಿತ್ಸೆಯಲ್ಲಿಮೂಡಲಗಿಯ ಪಶು ಆಸ್ಪತ್ರೆಯ ಸಿಬ್ಬಂದಿಯವರ ಸ್ಪಂದನೆಯುಶ್ಲಾಘನೀಯವಾಗಿದೆಎಂದರು.

ಡಾ. ಮಹಾದೇವಪ್ಪಕೌಜಲಗಿ, ಸುರೇಶ ಆದಪ್ಪಗೋಳ, ಮಹಾಂತೇಶ ಹೊಸೂರ, ಶಿವಶಂಕರ ಶಾಬಣ್ಣವರ, ಸರಸ್ವತಿ ಮುರಗೋಡ, ಲಕ್ಷ್ಮಣ ಶಾಬಣ್ಣವರ, ಯಮನಪ್ಪ ಬಾವಿಮನಿ, ಮಂಜುನಾಥ ಶಿವಾಪುರ, ಜಡಯ್ಯ ಹಿರೇಮಠ, ಹುಕುಮಚಂದ ಬೇವಿನಕಟ್ಟಿ,ತುಕಾರಾಮದೆಊಡ್ಡಮನಿ, ಶ್ರೀಕಾಂತ ಕಂಠಿ, ಮಂಜುನಾಥ ಮಾಲಗಾರ,ರವಿ ಬಳಿಗಾರ, ಶಿವು ಕಮತಗಿ, ಬಸು ಹಳ್ಳೂರ, ಪಶುಸಖಿಯರಾದ ನಿರ್ಮಲಾ, ಪೂಜಾ, ಸಾವಿತ್ರಿ ಇದ್ದರು.

# ಕನಕಗಿರಿ ಜಾತ್ರೆಯಲ್ಲಿ ಮತದಾನ ಜಾಗೃತಿ



**ಕೊಪ್ಪಳ :** ಕನಕಗಿರಿ ಪಟ್ಟಣದ ಐತಿಹಾಸಿಕ ಕನಕಾಚಲಪತಿ ದೇಗುಲದ ಜಾತ್ರೆ ನಿಮಿತ್ತ ಇಂದು ದೇಗುಲಕ್ಕೆ ಆಗಮಿಸಿದ ಭಕ್ತಾದಿಗಳಿಗೆ ತಾಲೂಕು ಸ್ವೀಪ್ ಸಮಿತಿ ವತಿಯಿಂದ ಮತದಾನ ಜಾಗೃತಿ ಕಾರ್ಯಕ್ರಮವನ್ನು ನಡೆಸಲಾಯಿತು.

ಈ ವೇಳೆ ತಾ.ಪಂ ಸಹಾಯಕ ನಿರ್ದೇಶಕರಾದ ಚಂದ್ರಶೇಖರ್ ಬಿ ಕಂದಕೂರ್ ಅವರು ಮಾತನಾಡಿ, 18 ವರ್ಷ ಮೇಲ್ಪಟ್ಟ ಪ್ರತಿಯೊಬ್ಬರು ಮತದಾನ ಮಾಡಬೇಕು. ಮತದಾನ ಪವಿತ್ರವಾದದ್ದು, ಯಾರು ಮತದಾನದಿಂದ ಹೊರಗುಳಿಯದೇ, ಪ್ರತಿಯೊಬ್ಬರು ಕಡ್ಡಾಯವಾಗಿ ಮತದಾನ ಮಾಡುವಂತೆ ತಿಳಿಸಿದರು. ಈ ವೇಳೆ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿ ದತ್ತಾತ್ರೇಯ ಹೆಗಡೆ ಸೇರಿದಂತೆ ತಾಲೂಕು ಸ್ವೀಪ್ ಸಮಿತಿ ಸದಸ್ಯರು ಹಾಗೂ ಸಿಬ್ಬಂದಿಗಳು ಹಾಜರಿದ್ದರು.

## ನಿಂಬೆವ್ವ ಮರಡಿ ನಿಧನ



**ತೇರದಾಳ :** ಸಸಾಲಟ್ಟಿ ಗ್ರಾಮದ ಪಂಚಮಸಾಲಿ ಸಮಾಜದ ಹಿರಿಯ ಜೀವಿ ನಿಂಬೆವ್ವ ಅಲ್ಲಪ್ಪ ಮರಡಿ(85) ನಿಧನರಾಗಿದ್ದಾರೆ. ಮೃತರಿಗೆ ಪುತ್ರಿ, ಇಬ್ಬರು ಪುತ್ರರು ಹಾಗೂ ಅಪಾರ ಬಂಧು ಬಳಗ ಇದ್ದಾರೆ.

## ಆರೋಗ್ಯ ಇಲಾಖೆಯ ಸಿಬ್ಬಂದಿಗಳಿಂದ ಮತದಾನ ಜಾಗೃತಿ

### ಕೊಪ್ಪಳ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸ್ವೀಪ್ ಕಾರ್ಯಕ್ರಮ

**ಕೊಪ್ಪಳ :** ಮೇ 7ರಂದು ಜರುಗುವ ಲೋಕಸಭಾ ಚುನಾವಣೆಯಲ್ಲಿ ಕಡ್ಡಾಯವಾಗಿ ಮತ ಚಲಾಯಿಸಬೇಕೆಂದು ಕೊಪ್ಪಳ ತಾಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗಂಗಮ್ಮ ಕಳಕಾಪುರ ಕರೆ ನೀಡಿದರು.

ಕೊಪ್ಪಳ ನಗರದ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ಸೋಮವಾರ ಆರೋಗ್ಯ ಇಲಾಖೆಯ ಸಿಬ್ಬಂದಿಗಳಿಂದ ಮತದಾನ ಜಾಗೃತಿಯ ಸ್ವೀಪ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಪ್ರತಿ ಮತ ದೇಶಕ್ಕೆ ಹಿತ ಎನ್ನುವಂತೆ ಮತದಾನದಿಂದ ದೂರ ಉಳಿಯಬಾರದು. ಪ್ರತಿ ಮತವು ನಿರ್ಣಾಯಕವಾಗಿದೆ. ಯಾವುದೇ ರೀತಿಯ



ಆಸೆ, ಅಮೀಷಗಳಿಗೆ ಒಳಗಾಗದೇ ನಿರ್ಭಿತವಾಗಿ ಮತ ಚಲಾಯಿಸಿರೆಂದು ಕರೆ ನೀಡಿದರು. ಈ ಸ್ವೀಪ್ ಕಾರ್ಯಕ್ರಮದಲ್ಲಿ ವೈದ್ಯಾಧಿಕಾರಿಗಳು, ಸಿನಿಯರ್ ಪಿ.ಎಚ್.ಓ.ಗಳು ಹಾಗೂ ಆರೋಗ್ಯ ಇಲಾಖೆಯ ಇತರೇ ಸಿಬ್ಬಂದಿಗಳು ಹಾಜರಿದ್ದರು.

# ಅಭೂತಪೂರ್ವ ಗುರುವಂದನೆ



**ಹಾರೂಗೇರಿ :** ಬ್ಯಾಂಡ್ ಬಾಜಿನೊಂದಿಗೆ ಗುರುಗಳನ್ನು ಸ್ವಾಗತಿಸಿ, ಸಾಂಪ್ರದಾಯಿಕ ಉಡುಗೆ ತೊಡುಗೆಗಳೊಂದಿಗೆ ಆಗಮಿಸಿದ್ದ ತಮ್ಮ ಹೈಸ್ಕೂಲ್ ಶಿಕ್ಷಕರನ್ನು ಗೌರವಿಸಿ, ವಂದಿಸಿದ ಅಪರೂಪದ ಸಮಾರಂಭವು ಸ್ಥಳೀಯ ಡಾ. ಎಲ್. ಎಸ್. ಜಂಬಗಿ ಅವರ ಆಯುರ್ವೇದ ಮಹಾವಿದ್ಯಾಲಯದ ವಾಗ್ಭಟ ಸಭಾಂಗಣದಲ್ಲಿ ಜರುಗಿತು. ಇದಕ್ಕೂ ಮೊದಲು ತಾವು 1979 ರಲ್ಲಿ ಕಲಿತ ಹೈಸ್ಕೂಲಿಗೆ ಹೋಗಿ ಅಲ್ಲಿ ತಾವು ಕಲಿತ ಹಳೆಯ ಶಾಲಾ ಕಟ್ಟಡದ ಮುಂದೆ ಗುರುಗಳ ಜೊತೆಯಾಗಿ ಫೋಟೋ ಕಾರ್ಯಕ್ರಮ ಮುಗಿಸಿ ತದನಂತರ ಜಂಬಗಿ ಕಾಲೇಜಿನಲ್ಲಿ ವೇದಿಕೆ ಕಾರ್ಯಕ್ರಮ ನೆರವೇರಿತು. ದಿವ್ಯ ಸಾನಿಧ್ಯವನ್ನು ಪೂಜ್ಯ ಪ್ರದೀಪ ಘಂಟಿ ಮಹಾರಾಜರು ವಹಿಸಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ. ಎಲ್. ಎಸ್. ಜಂಬಗಿ, ಡಾ. ವರ್ಷಾ ಎಲ್. ಜಂಬಗಿ, ಹಾಗೂ ಕಾರ್ಯದರ್ಶಿ ಸಿ. ಎಸ್. ಭೋಸಲೆ, ಮುಖ್ಯ ಅತಿಥಿಗಳಾಗಿ ಬ್ಯಾರಿಸ್ಟರ್ ಅಮರಸಿಂಹ ಪಾಟೀಲರು ವಹಿಸಿದ್ದರು. ಅನೇಕ ನಿವೃತ್ತ ಶಿಕ್ಷಕರು ವೇದಿಕೆಗೆ ಸಾಕ್ಷಿಯಾಗಿದ್ದರು. 1979 ರಲ್ಲಿ ಕಲಿತ ಹಲವಾರು ಸಹಪಾಠಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಮೂಡಲಗಿ ತಾಲೂಕಿನ ಹಳ್ಳೂರ ಚೆಕ್ ಪೋಷ್ಟದಲ್ಲಿ ದಾಖಲೆ ಇಲ್ಲದ 3.20 ಲಕ್ಷ ಹಣ ವಶಕ್ಕೆ



**ಮೂಡಲಗಿ :** ಸಮೀಪದ ಹಳ್ಳೂರ ಚೆಕ್ಕ ಪೋಷ್ಟದಲ್ಲಿ ಯಾವುದೇ ದಾಖಲೆಗಳಿಲ್ಲದೇ ಅಕ್ರಮವಾಗಿ ತೆಗೆದುಕೊಂಡು ಹೋಗುತ್ತಿದ್ದ ವ್ಯಕ್ತಿಯಿಂದ 3.20 ಲಕ್ಷ ರೂ. ಹಣವನ್ನು ಚುನಾವಣಾಧಿಕಾರಿಗಳು ಜಪ್ತಿ ಮಾಡಿಕೊಂಡಿರುವ ಘಟನೆ ಮಂಗಳವಾರ ನಡೆದಿದೆ.

ಲೋಕಸಭಾ ಚುನಾವಣೆ ಹಿನ್ನೇಲೆಯಲ್ಲಿ ಹಳ್ಳೂರ ಕ್ರಾಸದಲ್ಲಿನ ನಿರ್ಮಿಸಲಾದ ಚೇಕ ಪೊಷ್ಟದಲ್ಲಿ ಮುಧೋಳ ಕಡೆಯಿಂದ ಕೊಲ್ಲಾಪೂರಕ್ಕೆ ಹೊರಟ ಮುಧೋಳ ತಾಲೂಕಿನ ಸೂರಗಾಂವಿ ಗ್ರಾಮದ ವಿರೇಶ ಶಂಕ್ರಪ್ಪ ಹುದ್ದಾರ ಅವರದೆ ಒಡೆತನಕ್ಕೆ ಸೇ–ರಿದ ಸ್ವಿಪ್ಟ ಡಿಜಾಯರ್ ಕಾರಿನಲ್ಲಿ ಯಾವದೇ ದಾಖಲೆಗಳು ಇಲ್ಲದ 3 ಲಕ್ಷ 20 ಸಾವಿರ ಹಣವನ್ನುಸಾಗಿಸುವಾಗ ಚುನಾವಣಾ ಅಧಿಕಾರಿ ನೇತೃತ್ವದಲ್ಲಿ ಹಣ ವಶಪಡಿಸಿಕೊಂಡಿದ್ದಾರೆ. ತಾಲೂಕಾ ಮಾದರಿ ನೀತಿ ಸಂಹಿತೆ ಅಧಿಕಾರಿ ನವೀನಪ್ರಸಾದ ಕಟ್ಟಿಮನಿ, ಸಹಾಯಕ ಚುನಾವಣಾವಣಾಧಿಕಾರಿಗಳಾದ ಪಿ ಕೆ ಚಿಂಚಲಿ, ಸಂಗಮೇಶ ರೊಡ್ಡನವರ,ಪಿ ಎಸ್ ಐ ಚಂದ್ರಶೇಖರ ಹೆರಕಲ್ಲ ,ಎಪ್.ಎಸ್.ಟಿ,–ಎಸ್.ಎಸ್.ಟಿ,ವಿ.ಎಸ್.ಟಿ,ವಿವಿ.ಟಿ,ಎಮ್.ಸಿಸಿ ತಂಡಗಳ ಸಿಬ್ಬಂದಿ ಇದ್ದರು.

# ಅನುಭವ ಮಂಟಪ ನಿಜವಾದ ಸಂಸತ್ತು: ಡಾ. ಆಯ್. ಜಿ. ಮ್ಯಾಗೇರಿ

ವರದಿ:ಲಾಲಸಾಬ ಸವಾರಗೋಳ.

**ವಿಜಯಪುರ :** ಗುರು ಲಿಂಗ ಜಂಗಮ ಸೇವೆಗಳ ಮೂಲಕ ಕಾಯಕದ ಮಹತ್ವವನ್ನು ಸಾರಿದ ಕೀರ್ತಿ ಹನ್ನೆರಡನೇ ಶತಮಾನದ ಶರಣರಿಗೆ ಸಲ್ಲುತ್ತದೆ. ಅನುಭವ ಮಂಟಪ ಹನ್ನೆರಡನೆಯ ಶತಮಾನದ ನಿಜವಾದ ಸಂಸತ್ತು ಎಂದು ಜಿಲ್ಲಾ ಕೇಂದ್ರ ಕಾರಾಗೃಹದ ಅಧೀಕ್ಷಕ ಡಾ. ಆಯ್. ಜಿ. ಮ್ಯಾಗೇರಿ ಅಭಿಪ್ರಾಯಪಟ್ಟರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು , ತಾಲೂಕು ಹಾಗೂ ನಗರ ಘಟಕ ಸಾಹಿತ್ಯ ಪರಿಷತ್ತಿನ ಸಹಯೋಗದಲ್ಲಿ ನಡೆದ ದತ್ತಿನಿಧಿ ಕಾರ್ಯಕ್ರಮದಲ್ಲಿ ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಸತ್ಯ, ಶುದ್ಧ ಕಾಯಕದಿಂದ ಮಾಡಿದ ನಿಜವಾದ ಭಕ್ತಿ ಮಾತ್ರ ಶಿವಲಿಂಗಕ್ಕೆ ಸಲ್ಲುತ್ತದೆ ಎಂದರು.

ದತ್ತಿನಿಧಿ ಕಾರ್ಯಕ್ರಮದ ನಿಮಿತ್ಯ ಈರವ್ವ ಮಲ್ಲಪ್ಪ ಹಣಮಶೆಟ್ಟಿ, ದತ್ತಿ ದಾನಿಗಳು, ಎಸ್.ಎಮ್. ಹಣಮಶೆಟ್ಟಿ. "ಕಾಯಕಯೋಗಿ ನೂಲಿಯ ಚಂದಯ್ಯ" ನವರ ವಿಷಯದ ಕುರಿತು ಜಯಶ್ರೀ ಹಿರೇಮಠ ಅವರು ಉಪನ್ಯಾಸ ನೀಡಿ, ವಿಜಯಪುರ ಜಿಲ್ಲೆಯ



ಶಿವಣಗಿಯ ಶ್ರೇಷ್ಠ ಕಾಯಕ ಶರಣರಾದ ನೂಲಿಯ ಚಂದಯ್ಯನವರ ಕಾಯಕದ ಮಹತ್ವವನ್ನು ಎಲ್ಲರೂ ಅರಿಯಬೇಕು. ಯಾವುದೇ ಕಾಯಕವನ್ನು ಭಾವ ಶುದ್ಧಿಯಿಂದ, ಅಂತಃಕರಣೆಯ ಮೂಲಕ ಮಾಡಿದಾಗ ಮಾತ್ರ ನಿಜವಾದ ಆತ್ಮದ ಉನ್ನತಿ ಸಾಧ್ಯವಾಗುತ್ತದೆ. ನಾವು ಮಾಡಿದ ಕಾಯಕಕ್ಕೆ ಪ್ರತಿಯಾಗಿ ಹೆಚ್ಚಿನದನ್ನು ಅಪೇಕ್ಷಿಸಬಾರದು ಎಂಬುದನ್ನು ಅನೇಕ ನಿದರ್ಶನಗಳ ಮೂಲಕ ಅವರು ವಿವ–ರಿಸಿದರು.

ಉಪನ್ಯಾಸ ಎರಡರ ದತ್ತಿ ದಿ. ಕಾಶೀನಾಥ ಸಿದ್ಧಮಲ್ಲಪ್ಪ ಇಂಗಳೇಶ್ವರ ದತ್ತಿ ದಾನಿಗಳು ಎಸ್. ಕೆ. ಇಂಗಳೇಶ್ವರ. ಯಡೆಯೂರು ಸಿದ್ಧಲಿಂಗೇಶ್ವರರ ವಿಷಯದ ಕುರಿತು ಉಪನ್ಯಾಸ ನೀಡಿದ, ಕವಿಯಿತ್ರಿ ಸುಜಾತಾ ಹ್ಯಾಳದ ಅವರು ಹದಿನಾರನೇ ಶತಮಾನದಲ್ಲಿ ಆಗಿ ಹೋದ ಕನ್ನಡ ನಾಡು ಕಂಡ ಅನುಭಾವಿ ಸಂತ ಶರಣರಲ್ಲಿ ಎಡೆಯೂರಿನ ಶ್ರೀ ಸಿದ್ಧಲಿಂಗೇಶ್ವರರು ಒಬ್ಬ ಶ್ರೇಷ್ಠ ಪವಾಡ ಪುರುಷರಾಗಿದ್ದರು. ಸಿದ್ಧಲಿಂಗೇಶ್ವರರು ಚೆನ್ನಬಸವೇಶ್ವರರ ಮಾರ್ಗದರ್ಶನದಲ್ಲಿ ವಿದ್ಯಾಭ್ಯಾಸ ಮುಗಿಸಿದ ನಂತರ ಲೋಕ ಸಂಚಾರ ಮಾಡುತ್ತಾ , ಕನ್ಯಾಕುಮಾ–ರಿಯಿಂದ ಕಾಶ್ಮೀರದವರೆಗೆ, ಪಶ್ಚಿಮ ಘಟ್ಟಗಳಿಂದ ಅರುಣಾಚಲ ಪ್ರದೇಶದವರೆಗೆ ಇಡೀ ಭಾರತವನ್ನು ಸಂಚರಿಸಿ ಶಿವಯೋಗ, ಶಿವಭಕ್ತಿಯನ್ನು ಪ್ರಸಾರ ಮಾಡುವ ಮೂಲಕ ಸಿದ್ಧಲಿಂಗೇಶ್ವರರ ಅನೇಕ ಸಂದೇಶಗಳನ್ನು ಉಪನ್ಯಾಸದಲ್ಲಿ ತಿಳಿಸಿಕೊಟ್ಟರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ನಿವೃತ್ತ ಮುಖ್ಯಾಧ್ಯಾಪಕಿ ಶಾರದಾ ಐಹೊಳ್ಳಿ ಅವರು, ಕಾಯಕಯೋಗಿ ನೂಲಿಯ ಚಂದಯ್ಯನವರ ಹಾಗೂ ಯಡಿಯೂರು ಶ್ರೀ ಸಿದ್ಧಲಿಂಗೇಶ್ವರರ ಜೀವನದ ಸಂದೇಶಗಳನ್ನು ನಾವೆಲ್ಲರೂ ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ, ಸ್ವತಃಹ ಗಳಿಸಿದ ಹಣದಿಂದ ಮಾತ್ರ ದಾಸೋಹ ಮಾಡಿದಾಗ ಅದು ಭಗವಂತನ ಪಾದಕ್ಕೆ ಸಮರ್ಪಿತವಾಗಲು ಸಾಧ್ಯವೆಂದರು. ಕಾರ್ಯಕ್ರಮದಲ್ಲಿ ಕುಮಾರಿ ಅನುಶ್ರೀ ಹಾಗೂ ಶ್ರೀನಿಧಿ ಬಂಡೆಯವರು ಸುಶ್ರಾವ್ಯವಾಗಿ ವಚನ ಗಾಯನ ಮಾಡುವ ಮೂಲಕ ಗಮನ ಸೆಳೆದರು.

ಪೂಜ್ಯ ಶ್ರೀ. ವಿರತೀಶಾನಂದ ಸ್ವಾಮೀ–ಜಿಯವರು ಸಾನಿಧ್ಯ ವಹಿಸಿ ಮಾತನಾಡಿ, "ಲಿಂಗದ ಬಾಯಿ ಜಂಗಮವೆಂದು, ಹಿರಿದಾದ ಒಂದು ಮರಕ್ಕೆ ಮೂಲ ಆ ಮರದ ಬೇರು ಎನ್ನುತ್ತಾ , ವಚನ ಸಾಹಿತ್ಯ ಇಡೀ ವಿಶ್ವಕ್ಕೆ ಮಾದರಿಯಾದ ಸಾಹಿತ್ಯವಾಗಿದೆ ಎಂದರು.

ಡಾ. ವ್ಹಿ. ಡಿ. ಐಹೊಳ್ಳಿ, ಶಶಿಕಲಾ ನಾಯ್ಕೋಡಿ, ಪ್ರಭು ಅಳ್ಳಗಿ, ಜಿಲ್ಲಾ ದತ್ತಿ ಸಂಚಾಲಕ ರಾಜೇಸಾಬ ಶಿವನಗುತ್ತಿ ಮುಖ್ಯ ಅತಿಥಿಗಳಾಗಿ ವೇದಿಕೆಯ ಮೇಲೆ ಇದ್ದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕ.ಸಾ.ಪ ಅಧ್ಯಕ್ಷ ಹಾಸಿಂಪೀರ ವಾಲೀಕಾರ, ಸಾಹಿತಿಗಳಾದ ಶಂಕರ ಬೈಚಬಾಳ, ಸಿದ್ದಾರಾಮ ಬಿರಾದಾರ, ವಿದ್ಯಾವತಿ ಅಂಕಲಗಿ, ಅನ್ನಪೂರ್ಣ ಬೆಳ್ಳೆಣ್ಣವರ, ವಿಜಯಲಕ್ಷ್ಮಿ ಹಳಕಟ್ಟಿ, ಕಮಲಾ ಮುರಾಳ, ಜಿ. ಎಸ್. ಬಳ್ಳೂರ, ಶ್ರೀಶೈಲ ಬಿರಾದಾರ, ಸಂತೋಷಕುಮಾರ ಬಂಡೆ, ಅಹ್ಮದ್ ವಾಲೀಕಾರ, ಅನಸೂಯಾ ಮಜಗಿ, ಗಂಗಮ್ಮ ರಡ್ಡಿ , ಬಿ. ವಿ. ಪಟ್ಟಣಶೆಟ್ಟಿ, ಯುವರಾಜ್ ಚೋಳಕೆ, ಎ. ಎಚ್. ಕಜರಗಿ, ಅಲ್ತಾಫ್ ಮದಭಾವಿ ಹಾಜರಿದ್ದರು. ಕಸಾಪ ಗೌರವ ಕಾರ್ಯದರ್ಶಿ ಸುಭಾಸ ಕನ್ನೂರ ಸ್ವಾಗತಿಸಿದರು. ಡಾ. ಮಾಧವ ಎಚ್. ಗುಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿಲ್ಪಾ ಭಸ್ಮೆ ಸೊಗಸಾಗಿ ನಿರೂಪಿಸಿದರು. ಶೋಭಾ ಬಡಿಗೇರ ವಂದಿಸಿದರು.

# ಧಾರವಾಡ ಲೋಕಸಭೆ ಸಾರ್ವತ್ರಿಕ ಚುನಾವಣೆ

## ಚುನಾವಣಾ ಪ್ರಚಾರಕ್ಕೆ ಮಕ್ಕಳ ಬಳಕೆ ನಿಷೇಧ: ಜಿಲ್ಲಾ ಚುನಾವಣಾಧಿಕಾರಿ ದಿವ್ಯ ಪ್ರಭು



**ಧಾರವಾಡ :** ಲೋಕಸಭಾ ಚುನಾವಣೆಯಲ್ಲಿ ಚುನಾವಣಾ ಕಾರ್ಯಗಳಿಗೆ 18 ವರ್ಷದೊಳಗಿನ ಮಕ್ಕಳನ್ನು ಬಳಸಿಕೊಳ್ಳುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ನಿಷೇಧ ಮತ್ತು ನಿಯಂತ್ರಣ ಕಾಯ್ದೆ 1986 ರನ್ವಯ ಯಾವುದೇ ಉದ್ಯೋಗ ಮತ್ತು ಪ್ರಕ್ರಿಯೆಗಳಲ್ಲಿ 14 ವರ್ಷಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಲೋಕಸಭಾ ಚುನಾವಣಾ ಪ್ರಚಾರದ ಸಮಯದಲ್ಲಿ ವಿವಿಧ ರಾಜಕೀಯ ಪಕ್ಷಗಳು ಬಹು ವಿವಿಧ ಚಟುವಟಿಕೆಗಳಲ್ಲಿ 18 ವರ್ಷ ಪೂರ್ವದ ಮಕ್ಕಳನ್ನು ತೊಡಗಿಸಿಕೊಳ್ಳುವುದನ್ನು ನಿಷೇಧಿಸಲಾಗಿದೆ. ಅಂದರೆ ಮಕ್ಕಳನ್ನು ಯಾವುದೇ ಚುಣಾವಣಾ ಪ್ರಚಾರದಲ್ಲಿ ಬಳಸದಂತೆ ಕರಪತ್ರ ಹಾಗೂ ಪೋಸ್ಟರ್ ಹಂಚಲು ಅಥವಾ ಘೋಷಣೆ ಕೂಗುವುದು, ಚುನಾವಣಾ ಸಭೆ, ಹೋಲ್ಡಿಂಗ್ ಕಟ್ಟುವುದು, ಪ್ರಚಾರ ವಾಹನದ ಮೇಲೆ ಮಕ್ಕಳನ್ನು ಕೂರಿಸುವುದು, ಒಟ್ಟಾರೆಯಾಗಿ ಪ್ರಚಾರ ಸಭೆಗಳಲ್ಲಿ ಮಕ್ಕಳನ್ನು ಬಳಸದಂತೆ ನಿರ್ದೇಶಿಸಲಾಗಿದೆ.

ಲೋಕಸಭಾ ಸಾರ್ವತ್ರಿಕ ಚುನಾವಣೆ 2024ಕ್ಕೆ ಯಾವುದೇ ಪಕ್ಷಗಳು ಚುನಾವಣಾ ಮತ್ತು ಪ್ರಚಾರ ಕಾರ್ಯಗಳಲ್ಲಿ 18 ವರ್ಷದೊಳಗಿನ ಮಕ್ಕಳನ್ನು ಬಳಸಿಕೊಳ್ಳದಂತೆ ಕ್ರಮವಹಿಸಲು ಹಾಗೂ ಉಲ್ಲಂಘನೆ ಕಂಡು ಬಂದಲ್ಲಿ ಕಾಯ್ದೆಯ ಕಲಂ.ಗಳ ಅನ್ವಯ ಅಗತ್ಯ ಸೂಕ್ತ ಕ್ರಮ ಕೈಗೊಳ್ಳುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.





1) ಧಾರವಾಡ ಜಿಲ್ಲೆಯ ದೇವರಹುಬ್ಬಳ್ಳಿ ಗ್ರಾಮದಲ್ಲಿ ಗ್ರಾಮ ಪಂಚಾಯತನಿಂದ ಜನ, ಜಾನುವಾರುಗಳಿಗೆ ನೀರು ಪೂರೈಕೆ ವ್ಯವಸ್ಥೆ ಮಾಡಿರುವುದು.

2) ಧಾರವಾಡ ತಾಲೂಕಿನ ಅಂಬ್ಳಿಕೊಪ್ಪ ಗ್ರಾಮದ ಹೊರ ವಲಯದ ಕಾಡಿನ ಅಂಚಿನ ಕೆರೆಯಲ್ಲಿ ಮೇಕೆ, ಆಡು ನೀರು ಕುಡಿಯುತ್ತಿರುವುದು.

# ಧಾರವಾಡ ಲೋಕಸಭಾ ಸಾರ್ವತ್ರಿಕ ಚುನಾವಣೆ

## ದಿನದ 24 ಗಂಟೆ ಕಾರ್ಯನಿರತ ಜಿಲ್ಲಾ ಮತದಾರರ ಸಹಾಯವಾಣಿ ಕೇಂದ್ರ: ಸಾರ್ವಜನಿಕರಿಂದ ಉತ್ತಮ ಸ್ಪಂದನೆ

**ಧಾರವಾಡ :** ಲೋಕಸಭಾ ಚುನಾವಣೆಗಾಗಿ ಜಿಲ್ಲಾಧಿಕಾರಿಗಳ ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳ ಕಛೇರಿಯಲ್ಲಿ ಜಿಲ್ಲಾ ಮತದಾರರಿಗಾಗಿ ಸಹಾಯವಾಣಿ ಕೇಂದ್ರವನ್ನು ಮಾರ್ಚ್ 16 ರಿಂದ ಪ್ರಾರಂಭಿಸಲಾಗಿದ್ದು, ಸಾರ್ವಜನಿಕರಿಂದ ಉತ್ತಮ ಸ್ಪಂದನೆ ಬರುತ್ತಿದೆ. ಮತದಾರರ ಪ್ರತಿ ಕರೆಗೆ ಮಾಹಿತಿಯುಕ್ತ ಪರಿಹಾರ ತಿಳಿಸಲಾಗುತ್ತಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿದಿವ್ಯಪ್ರಭುಅವರುತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಿಲ್ಲಾ ಚುನಾವಣಾ ಕಂಟ್ರೋಲ್ ರೂಮ್‌ನಲ್ಲಿ ಆರಂಭಿಸಲಾಗಿರುವ ಈ ಸಹಾಯವಾಣಿ ಕೇಂದ್ರವು ದಿನದ 24 ಗಂಟೆ (24 ಥ 7) ಕಾರ್ಯ ನಿರ್ವಹಿಸುತ್ತಿದೆ. ಸಾರ್ವಜನಿಕರಿಂದ ಕರೆ ಸ್ವೀಕಾರಕ್ಕೆ ಒಟ್ಟು 6 ಸಿಬ್ಬಂದಿಗಳನ್ನುಪ್ರತಿ8ಗಂಟೆಗಳಿಗೆಇಬ್ಬರಂತೆ (ಬೆಳಿಗ್ಗೆ 6 ರಿಂದ 2 ಗಂಟೆ. 2ಗಂಟೆಯಿಂದ ರಾತ್ರಿ 10 ಗಂಟೆಗೆ ಹಾಗೂ ರಾತ್ರಿ 10 ಗಂಟೆಯಿಂದ ಬೆಳಗ್ಗೆ 6 ಗಂಟೆಯವರೆಗೆ) ಕಾರ್ಯನಿರ್ವಹಿಸಲು ನೇಮಿಸಲಾಗಿದೆ.

ಈ 6 ಸಿಬ್ಬಂದಿಗಳ ಮೇಲ್ವಿಚಾರಕರನ್ನಾಗಿ ಜಿಲ್ಲಾ ನೋಡಲ್ ಅಧಿಕಾರಿಯಾಗಿ ಕೃಷಿ ವಿವಿಯ ಕುಲಸಚಿವೆ, ಹಿರಿಯ ಕೆಎಎಸ್ ಅಧಿಕಾರಿ ಜಯಲಕ್ಷ್ಮಿರಾಯಕೊಡ ಅವರನ್ನು ನೇಮಿಸಲಾಗಿದೆ ಎಂದು ಅವರು ತಿಳಿಸಿದರು.

ಜಿಲ್ಲೆಯ ಸಹಾಯವಾಣಿ ಕೇಂದ್ರಕ್ಕೆ 1950 ಟೋಲ್ ಫ್ರೀ ನಂಬರ್‌ನ ಸೌಕರ್ಯ ಕಲ್ಪಿಸಲಾಗಿದೆ. ಈ ದೂರವಾಣಿಯಲ್ಲಿ PRI(Priority Rate Interface) ಇದ್ದು, ಒಂದೇ ಸಲ ಹಲವು ಕರೆಗಳನ್ನು ಸ್ವೀಕರಿಸುವ ಸಾಮರ್ಥ್ಯ ಹೊಂದಿರುತ್ತದೆ ಎಂದು ಅವರು ತಿಳಿಸಿದ್ದಾರೆ.

ಜಿಲ್ಲೆಯ ಸೀಮೆಯೊಳಗೆ ವಾಸಿಸುವ ವ್ಯಕ್ತಿಗಳು ಜಿಲ್ಲೆಯ ಮತದಾರರ ಸಹಾಯವಾಣಿಗೆ ಕರೆ ಮಾಡಲು 1950 ಸಂಖ್ಯೆಯನ್ನು ಡಯಲ್ ಮಾಡಿದರೆ ಸಾಕು. ಲ್ಯಾಂಡಲೈನ್ ಇಲ್ಲವೆ ಯಾವುದೇ ಮೊಬೈಲ್ ಫೋನ್‌ನಿಂದ ಕರೆ ಮಾಡಬಹುದು. ಬೇರೆ ಜಿಲ್ಲೆಗಳಿಂದ ಅಥವಾ ಹೊರರಾಜ್ಯಗಳಿಂದ ಈ ಸಹಾಯವಾಣಿಗೆ ಕರೆ ಮಾಡಬೇಕಾದಲ್ಲಿ ಖಇಿಆ ಕೋಡನ್ನು ಉಪಯೋಗಿಸಿ 1950 ಡಯಲ್ ಮಾಡಬೇಕು.

ಮತದಾರರು ಹಾಗೂ ಸಾರ್ವಜನಿಕರು ಕೇಳುವ ಚುನಾವಣಾ ಸಂಬಂಧಿತ ವಿಷಯಗಳ ಮಾಹಿತಿಯನ್ನು ಒದಗಿಸಲಾಗುವುದು.




ಸಾರ್ವಜನಿಕರಿಂದ, ಮಾಹಿತಿ ಕೇಳಿ, ಮತದಾರರ ಕಾರ್ಡಗೆ ಹೊಸ ಅರ್ಜಿ ಸಲ್ಲಿಸಿದ್ದು ಯಾವಾಗ ಬರುತ್ತದೆ? ಮತದಾರರ ಪಟ್ಟಿಯಲ್ಲಿ ನನ್ನ ಹೆಸರು ಸಿಗುತ್ತಿಲ್ಲ. ಮತದಾರರ ಕಾರ್ಡಲ್ಲಿ ಹೆಸರು. ಲಿಂಗ. ಫೋನ್ ನಂಬರ್ ತಿದ್ದುಪಡಿ ಮಾಡಲು ಯಾವ ಫಾರಂ ತುಂಬಬೇಕು? ನಮ್ಮ ಭಾಗದ ಮತಗಟ್ಟೆ ಸಂಖ್ಯೆ ಎಷ್ಟು? ವಿಳಾಸ ಬದಲಾವಣೆ ಮಾಡಿಕೊಳ್ಳುವುದು ಹೇಗೆ? ಹೀಗೆ ಮತದಾರರ ಚೀಟಿಗೆ/ಕಾರ್ಡಗೆ ಸಂಬಂಧಿಸಿದ ಹಲವಾರು ಪ್ರಶ್ನೆಗಳು ಕುರಿತಂತೆ ಫೋನ್ ಕರೆಗಳು ಸ್ವೀಕೃತವಾಗುತ್ತಿದ್ದು, ಸಹಾಯವಾಣಿ ಸಿಬ್ಬಂದಿಗಳು ಸೂಕ್ತ ಉತ್ತರ ನೀಡುತ್ತಿದ್ದಾರೆ.

ಈ ರೀತಿ ಬರುವ ಕರೆಗಳಲ್ಲಿ ಯುವ ಮತದಾರರ ಕರೆಗಳೇ ಹೆಚ್ಚಾಗಿವೆ. ಅದರಲ್ಲೂ ಗ್ರಾಮೀಣ ಯುವ ಮತದಾರರಿಂದ ಅತಿ ಹೆಚ್ಚು ಕರೆಗಳು ಸ್ವೀಕಾರವಾಗುತ್ತಿವೆ. ಮತದಾರರ ನೋಂದಣಿ, ರದ್ದುಪಡಿಸುವಿಕೆ, ಸ್ಥಳಾಂತರ ಕುರಿತ ಫಾರಂ 6,7,8 ಕುರಿತಂತೆ ಕರೆಗಳಿಗೂ ಕೂಡ ಸಂಬಂಧಿತ (AERO) ಎಇಆರ್‌ಓ ಗಳಿಂದ ಮಾಹಿತಿ ಪಡೆದು ಉತ್ತರಿಸಲಾಗುತ್ತಿದೆ ಎಂದು ಅವರು ಹೇಳಿದ್ದಾರೆ.

ಪ್ರತಿ ಕರೆಯ ಮಾಹಿತಿಯನ್ನು ರಿಜಿಸ್ಟರ್‌ಗಳಲ್ಲಿ ದಾಖಲು ಮಾಡಲಾಗುತ್ತಿದ್ದು, ಪ್ರತಿ ಕರೆಯ ಹೆಲ್ಪಲೈನ್ ಚಾಪ್ಟರ್‌ನಲ್ಲಿ ದಾಖಲಾಗಿ ಕೇಂದ್ರ ಕಛೇರಿಗೆ ದಾಖಲಿಸಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

ಈ ರೀತಿ ಕರೆಗಳ ಜೊತೆ ಚುನಾವಣೆಗೆ ಸಂಬಂಧಿಸಿದ ದೂರುಗಳಿಗೂ ಉತ್ತರಿಸಲಾಗುತ್ತಿದೆ. ಈ ದೂರುಗಳನ್ನು ಎನ್.ಜಿ.ಆರ್.ಎಸ್ (NGRS) ಮತ್ತು ಪಿ.ಜಿ.ಆರ್.ಎಸ್(PGRS)ಪೋರ್ಟಲ್‌ಗಳ ಮೂಲಕ ಸ್ವೀಕೃತಗೊಳ್ಳುತ್ತಿವೆ. ದೂರು ಸ್ವೀಕರಿಸಿದ ನಂತರ 24 ರಿಂದ 48 ಗಂಟೆಗಳ ಒಳಗಡೆ ಪ್ರತಿ ದೂರಿಗೆ ಸಂಬಂಧಿತ ಇಲಾಖೆಯಿಂದ ಮಾಹಿತಿ ಪಡೆದು ನಂತರ ಜಿಲ್ಲಾಧಿಕಾರಿ, ಜಿಲ್ಲಾ ಚುನಾವಣಾಧಿಕಾರಿಗಳ ಸ್ಪಷ್ಟ ಅಭಿಪ್ರಾಯದೊಂದಿಗೆ ಚುನಾವಣಾ ಆಯೋಗದ ಈಮೇಲ್ cmc.ceo.f@gmail.com ಗೆ ಸಲ್ಲಿಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಇಂದಿನ (ಏ.01) ವರೆಗೆ ಜಿಲ್ಲಾ ಮತದಾರ ಸಹಾಯವಾಣಿ ಕೇಂದ್ರದಿಂದ ಮತದಾರ ಮಾಹಿತಿಯೊಂದಿಗೆ 610 ಎನ್.ಜಿ.ಎಸ್.ಪಿ (ಓಉಖಕ), ಹಾಗೂ 16 ಪಿ.ಜಿ.ಆರ್.ಎಸ್ (ಕಉಖಖ) ದೂರುಗಳ ಕರೆಗಳನ್ನು ಸ್ವೀಕರಿಸಲಾಗಿದೆಎಂದುಅವರುತಿಳಿಸಿದ್ದಾರೆ.

ವಿವಿಧ ಮತಕ್ಷೇತ್ರಗಳ ಸಹಾಯವಾಣಿ ಸಂಖ್ಯೆಗಳ ವಿವರ: ಧಾರವಾಡ ಜಿಲ್ಲೆಯ ಮತದಾರ ಸಹಾಯವಾಣಿ ಸಂಖ್ಯೆಗಳು 1950, 0836–2446650, 0836–2446651 ಹಾಗೂ 0836–2446652, ಧಾರವಾಡಗ್ರಾಮೀಣತಾಲೂಕಿನಮತದಾರ ಸಹಾಯವಾಣಿ ಸಂಖ್ಯೆ 0836–2233822, ನವಲಗುಂದ ತಾಲೂಕಿನ ಮತದಾರ ಸಹಾಯವಾಣಿ ಸಂಖ್ಯೆ 08380–229240, ಕುಂದಗೋಳ ತಾಲೂಕಿನ ಮತದಾರ ಸಹಾಯವಾಣಿ ಸಂಖ್ಯೆ 08304–290239, ಹುಬ್ಬಳ್ಳಿ–ಧಾರವಾಡ ಪೂರ್ವ ವಿಧಾನಸಭಾ ಮತಕ್ಷೇತ್ರದಮತದಾರಸಹಾಯವಾಣಿಸಂ–ಖ್ಯೆ0836–2213833, ಹುಬ್ಬಳ್ಳಿ–ಧಾರವಾಡ ಕೇಂದ್ರವಿಧಾನಸಭಾಮತಕ್ಷೇತ್ರದಮತದಾರ ಸಹಾಯವಾಣಿ ಸಂಖ್ಯೆ 0836–2355106, ಹುಬ್ಬಳ್ಳಿ–ಧಾರವಾಡ ಪಶ್ಚಿಮ ವಿಧಾನ ಸಭಾ ಮತಕ್ಷೇತ್ರದ ಮತದಾರ ಸಹಾಯವಾಣಿ ಸಂಖ್ಯೆ 0836–2446133, ಕಲಘಟಗಿ ತಾಲೂಕಿನ ಮತದಾರ ಸಹಾಯವಾಣಿ ಸಂಖ್ಯೆ 08370–284535 ಗೆ ಕರೆ ಮಾಡಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಧಾರವಾಡ ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

## ಎಸ್‌ಎಸ್‌ಎಲ್‌ಸಿ ಪರೀಕ್ಷೆ: ಗಣಿತ ಪರೀಕ್ಷೆಗೆ 28,624 ವಿದ್ಯಾರ್ಥಿಗಳು ಹಾಜರು: 345 ಗೈರು

**ಧಾರವಾಡ :** ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಗಳು ಉತ್ತಮ ರೀತಿಯಲ್ಲಿ ನಡೆದಿದ್ದು, ಇಂದಿನ ಗಣಿತ ವಿಷಯದ ಪರೀಕ್ಷೆಗೆ ಜಿಲ್ಲೆಯ ಪರೀಕ್ಷಾ ಕೇಂದ್ರಗಳಿಗೆ 28,624 ವಿದ್ಯಾರ್ಥಿಗಳು ಹಾಜರಾಗಿದ್ದರು. ಮತ್ತು ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ 345 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದರು ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್.ಎಸ್. ಕೆಳದಿಮಠ ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಿಲ್ಲೆಯ 7 ತಾಲೂಕುಗಳ 101 ಪರೀಕ್ಷಾ ಕೇಂದ್ರಗಳಲ್ಲಿ ನಿಯಮಾನುಸಾರ ಪರೀಕ್ಷೆ ನಡೆದಿವೆ.

ಜಾಗೃತ ದಳದ ಅಧಿಕಾರಿಗಳು ನಕಲು ತಡೆಯಲು ಉತ್ತಮ ತಪಾಸಣೆ ಕೈಗೊಂಡಿದ್ದಾರೆ ಎಂದು ಅವರು ತಿಳಿಸಿದ್ದಾರೆ.

## ಏ.18 ರಿಂದ ಮಹಾಕೂಟದಲ್ಲಿ ರಾಜ್ಯಮಟ್ಟದ ಕರಾಟೆ ಕ್ಯಾಂಪ್



**ಬಾಗಲಕೋಟೆ :** ರಾಜ್ಯದ ಪ್ರತಿಷ್ಠಿತ ಕರಾಟೆ ಸಂಸ್ಥೆ ರಾಠೋಡ ಮಾರ್ಷಲ್ ಆರ್ಟ್ಸ್ & ಸ್ಕಿಲ್ ಯೂನಿಯನ್ ಬಾಗಲಕೋಟೆ ವತಿಯಿಂದ ಇದೇ ಏಪ್ರೀಲ್ 18 ರಿಂದ 21 ರವರೆಗೆ ನಾಲ್ಕು ದಿನಗಳ ಬಾದಾಮಿ ತಾಲೂಕಿನ ಸುಕ್ಷೇತ್ರ ದಕ್ಷಿಣ ಕಾಶಿ ಎಂದೇ ಪ್ರಖ್ಯಾತಿ ಹೊಂದಿರುವ ಮಹಾಕೂಟದಲ್ಲಿ ರಾಜ್ಯ ಮಟ್ಟದ ಕರಾಟೆ ಕ್ಯಾಂಪ್ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ಚೀಪ್ ಕೋಚ್ ಎಸ್.ಆರ್.ರಾಠೋಡ ತಿಳಿಸಿದ್ದಾರೆ.

ಸತತ ನಾಲ್ಕು ದಿನಗಳ ಕಾಲ ಊಟ ವಸತಿಯೊಂದಿಗೆ ಕರಾಟೆ, ಯೋಗ, ಮೆಡಿಟೇಷನ್, ಸ್ಟಂಟ್ಸ್, ಅಡ್ವೆಂಚರ್, ಸ್ವಿಮಿಂಗ್, ಏರೋಬಿಕ್ಸ್ ಸೇರಿದಂತೆ ಇನ್ನಿತರ ತರಬೇತಿಗಳು ನಡೆಯಲಿದ್ದು ತರಬೇತಿ ಶಿಬಿರದಲ್ಲಿ ಇಂಟರ್ ಸ್ಕೂಲ್ ಕರಾಟೆ ಚಾಂಪಿಯನ್‌ಶೀಪ್, ಬ್ಲ್ಯಾಕ್‌ಬೆಲ್ಟ್ ಪರೀಕ್ಷೆ, ಕಲರ್ ಬೆಲ್ಟ್ ಪರೀಕ್ಷೆ ಕೂಡ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ. ಆಸಕ್ತ ವಿದ್ಯಾರ್ಥಿಗಳು, ಯುವಕರು, ಯುವತಿಯರು ಹೆಚ್ಚಿನ ಮಾಹಿತಿಗಾಗಿ 9900294284, 9513258092 ಗೆ ಸಂಪರ್ಕಿಸಲು ಕೋರಲಾಗಿದೆ.

## ವಿಜಯಪುರ ನಗರದ ಬಾರ್‌ಗಳು ಸಮಯಕ್ಕೂ ಮುಂಚೆ ತೆರೆಯುತ್ತಿರುವವರ ವಿರುದ್ಧ ಕ್ರಮಕೈಗೊಳ್ಳಲು ಕರ್ನಾಟಕ ಯುವಗರ್ಜನೆ ವತಿಯಿಂದ ಮನವಿ

**ವಿಜಯಪುರ :** ದಿನಾಂಕ: 01–04–2024 ರಂದು ಕರ್ನಾಟಕ ಯುವಗರ್ಜನೆ ಸಂಘಟನೆಯಿಂದ ಉಪ ವಿಭಾಗಾಧಿಕಾರಿಗಳು ಅಬಕಾರಿ ಇಲಾಖೆಯವರಲ್ಲಿ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಸಂಘಟನೆ ರಾಜ್ಯಾಧ್ಯಕ್ಷ ಬಸವರಾಜ ಎಂ. ಖಂಡೇಕರ ಮಾತನಾಡಿ ವಿಜಯಪುರ ನಗರದ ಹಲವು ಬಾರ್‌ಗಳು ನಸುಕಿನ ಜಾವಾ ತೆರೆಯುತ್ತಿದ್ದು, ಇದರಿಂದ ಕುಡಿತದ ವ್ಯಸನಕ್ಕೆ ಒಳಗಾದವರು ಬಾರ್‌ಗಳಿಗೆ ನಸುಕಿನ ಜಾವಾ ಹೋಗಿ ಕುಡಿದು ನಗರದ ರಸ್ತೆಗಳಲ್ಲಿ ಬಿದ್ದು ಒದ್ದಾಡುವುದು, ಅಸಭ್ಯ ವರ್ತನೆ ಮಾಡುತ್ತಾ ನಗರದಲ್ಲಿ ತಿರುಗುವುದರಿಂದ ಕಾಲೇಜಿಗೆ ಹೋಗುವ ವಿದ್ಯಾರ್ಥಿನಿಯರು / ವಿದ್ಯಾರ್ಥಿಯಗಳು ಹಾಗೂ ಸಾಮಾನ್ಯ ಸಭ್ಯ ಜನರು ನಗರದಲ್ಲಿ ತಿರುಗಾಡದಂತಹ ಪರಿಸ್ಥಿತಿ ಉಂಟಾಗಿರುತ್ತದೆ.



ಆದರೆ ಈ ರೀತಿ ನಗರದ ಹಲವು ಬಾರಗಳು ಓಪನ್ ಮಾಡಿ ಅಬಕಾರಿ ಇಲಾಖೆಯ ಎಲ್ಲಾ ನಿಯಮಗಳನ್ನು ಗಾಳಿಗೆ ತೂರಿ ರಾಜಾರೋಷವಾಗಿ ಮಧ್ಯ ಮಾರಾಟ ಮಾಡುತ್ತಿರುವುದು ಸಾರ್ವಜನಿಕರ ಸಿಟ್ಟಿಗೆ ಕಾರಣವಾಗಿರುತ್ತದೆ.

ಮತ್ತೆ ಇಲಾಖೆಯಿಂದ ಮಧ್ಯ ಅಂಗಡಿಗಳಿಗೆ ಪರವಾನಗಿ ನೀಡುವಾಗ ಷರತ್ತುಗಳೊಂದಿಗೆ ಪರವಾನಿಗೆ ನೀಡಿದರು CL-2 ನಲ್ಲಿ ಕೌಂಟರ್ ನಲ್ಲಿ ತೆಗೆದು–ಕೊಂಡು ಹೊಗಬೇಕು ಆದ–ರೆ ಕೆಲವೊಂದು ಕಡೆ ಅಲ್ಲೆ ಕುಡಿಯಲು ನಿಡುತ್ತಾರೆ CL-4 ಪರವಾನಿಗೆಯಲ್ಲಿ ಕ್ಲಬ್ ಸದಸ್ಯರಿಗೆ ಮಾತ್ರ ಮಧ್ಯ ಕುಡಿಯಲು ಅವಕಾಶ ಇರುತ್ತೆ ಅವರು ಎಲ್ಲರಿಗೂ ಮಧ್ಯ ಕುಡಿಯಲು ನಿಡುತ್ತಾರೆ. ಇದು ಅಕ್ಷಮ್ಯ ಅಪರಾಧ ಇನ್ನು ವಿಜಯಪುರ ನಗರದ ಹೃದಯ ಭಾಗ ಆಗಿರುವ ಗಾಂದಿ ಚೌಕ್ ಸುತ್ತಮುತ್ತಲಿನ ಬಾರಗಳು ಮಾತ್ರ ಬೆಳಗ್ಗೆ ಎದ್ದರೆ ಸಾಕು ಅವರಿಗೆ ವ್ಯಾಪಾರ ಅಷ್ಟೇ ಬೇಕು ಜನರ ಜೀವನ ಹಾಳು ಆದರು ಪರವಾಗಿಲ್ಲ, ಅನ್ನುವ ಮನಸ್ಥಿತಿಗೆ ಬಂದಿದ್ದಾರೆ.

ಈ ಕುರಿತು ಅಬಕಾರಿ ಇಲಾಖೆಯ ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಒಂದು ವೇಳೆ ಇವರ ಮೇಲೆ 15 ದಿನಗಳಲ್ಲಿ ಸೂಕ್ತ ಕಾನೂನು ಕ್ರಮ ಕೈಗೊಳ್ಳದೆ ಇದರೆ ನಾವು ವಿಜಯಪುರ ಜಿಲ್ಲಾಧಿಕಾರಗಳ ಕಛೇರಿ ಮುಂದೆ ಜಿಲ್ಲಾ ಉಸ್ತುವಾರಿ ಸಚಿವರು ನಮ್ಮ ಹೋರಾಟದ ಜಾಗಕ್ಕೆ ಬರುವ ತನಕ ನಾವು ಧರಣಿ ಸತ್ಯಾಗ್ರಹ ಮಾಡಬೇಕಾಗುತ್ತದೆ ಎಂದು ಮನವಿಯಲ್ಲಿ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸಂಘಟನೆಯ ಸದಸ್ಯರಾದ ಮಹೇಶ ವಠಾರ, ಗಣಪತಿ ಉಪ್ಪಾರ, ಸೋಮು ಹಿರೇಮಠ, ಸಾಗರ ಸವದಿ, ಸಿದ್ದು ನಾಗಠಾಣ ಲಾಳೇಮಶಾಕ ನದಾಫ, ಮಹಾದೇವ ಪವಾರ ಇನ್ನಿತರರು ಉಪಸ್ಥಿತರಿದ್ದರು.

## ಮಕ್ಕಳ ಭವಿಷ್ಯ ಪರೀಕ್ಷೆ ಮೇಲೆ ಅವಲಂಭಿಸಿದೆ– ಬಂಗಾರೆಮ್ಮ ದೊಡಮನಿ

**ವಿಜಯಪುರ :** ಇತ್ತೀಚಿಗೆ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ ವ್ಯಾಪ್ತಿಯ ಬಿಕಾಂ ಎರಡನೇ ಸೆಮಿಸ್ಟರ್ ಫೈನಾನ್ಸಿಯಲ್ ಮ್ಯಾನೇಜ್ಮೆಂಟ್ ಪ್ರಶ್ನೆ ಪತ್ರಿಕೆ ಸೋರಿಕೆಯನ್ನು ಗಂಭೀರವಾಗಿ ಪರಿಗಣಿಸುವಂತೆ ಹುಣಶ್ಯಾಳ ಜಿಲ್ಲಾ ಪಂಚಾಯತಿ ಸೇವಾ ಆಕಾಂಕ್ಷಿ ಬಂಗಾರೆಮ್ಮ ಮಾನಪ್ಪ ದೊಡಮನಿ ಸರ್ಕಾರಕ್ಕೆ ಆಗ್ರಹಿಸಿದ್ದಾರೆ.

ಪ್ರಶ್ನೆ ಪತ್ರಿಕೆ ಸೋರಿಕೆಯಾದ ವರದಿ ವೃತ್ತಪತ್ರಿಕೆಗಳಲ್ಲಿ ಬಂದ ವಿಷಯ ಪ್ರಸ್ತಾಪಿಸಿ, ಇದರಿಂದ ಸಮಾಜ ಸುಶಿಕ್ಷಿತದಿಂದ ಅಶಿಕ್ಷಿತದ ಕಡೆಗೆ ಸಾಗುತ್ತದೆ, ಇದು ಅಕ್ಷಮ್ಯ ಎಂದರು. ಇಂತಹ ಘಟನೆಗಳಿಂದ ಕಷ್ಟಪಟ್ಟು ಪರೀಕ್ಷೆಗೆ ತಯಾರಿ ನಡೆಸಿ, ದೂರದ ಊರುಗಳಿಂದ ಪ್ರಯಾಣಿಸಿ, ಸರಿಯಾಗಿ ಊಟ, ನಿದ್ರೆ ಇಲ್ಲದೆ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳ ಆತ್ಮವಿಶ್ವಾಸ ಕುಂದಿಸುತ್ತದೆ.

ಎಸ್.ಎಸ್.ಎಲ್.ಸಿ ಯಿಂದ ಸ್ಪರ್ಧಾತ್ಮಕ ಪರೀಕ್ಷೆಗಳ ವರೆಗೆ ಪ್ರಶ್ನೆ ಪತ್ರಿಕೆಗಳು ಸೋರಿಕೆಯಾಗುವ ವಿಷಯ ಇತ್ತೀಚಿಗೆ ಸಾಮಾನ್ಯವಾಗಿವೆ. ಇದರಿಂದ ವಿದ್ಯಾರ್ಥಿಗಳಿಗೆ ಗೊಂದಲವಾಗುತ್ತದೆ ಹಾಗೂ ಪ್ರಾಮಾಣಿಕ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಿದೆ, ಇಂತಹ ಘಟನೆಗಳಿಗೆ ಕಾರಣರಾದ ವಿಶ್ವವಿದ್ಯಾಲಯ ಹಾಗೂ ಪರೀಕ್ಷಾ ಮಂಡಳಿಗಳ ಮೇಲುಸ್ತುವಾರಿಗಳ ಮೇಲೆ ಶಿಸ್ತು ಕ್ರಮ ಜರುಗಿಸಬೇಕು. ನಕಲಿ ಅಭ್ಯರ್ಥಿಗಳ ಹಾಜರಿ, ಉತ್ತರ ಪತ್ರಿಕೆಗಳ ನಕಲು, ದಾಖಲೆಗಳನ್ನು ತಿರುಚುವುದು, ಮೆರಿಟ್ ಪಟ್ಟಿ ಸಿದ್ಧಪಡಿಸುವಲ್ಲಿ ಅಕ್ರಮ ಎಸಗುವುದು, ಉದ್ದೇಶಪೂರ್ವಕವಾಗಿ ಭದ್ರತಾ ವ್ಯವಸ್ಥೆ ಉಲ್ಲಂಘಿಸುವುದು, ಪರೀಕ್ಷಾರ್ಥಿಗಳಿಗೆ ಸೀಟು ನಿಗದಿಪಡಿಸುವಲ್ಲಿ ಅಕ್ರಮ ಎಸಗುವುದು, ಉದ್ದೇಶಪೂರ್ವಕವಾಗಿ ನಿಯಮಗಳನ್ನು ಉಲ್ಲಂಘಿಸುವ ಕ್ರಮವನ್ನು ಪರೀಕ್ಷಾ ಅಕ್ರಮಗಳೆಂದು ಹೊಸ ಮಸೂದೆಯಡಿ ಪರಿಗಣಿಸಲಾಗುತ್ತದೆ. ಶಿಕ್ಷಣ ಸಂಸ್ಥೆಗಳೇ ಅಕ್ರಮಗಳಲ್ಲಿ ತೊಡಗಿದ್ದರೆ ಆಸ್ತಿಯ ಜಪ್ತಿ ಜೊತೆಗೆ, ಪರೀಕ್ಷಾ ವೆಚ್ಚ ವಸೂಲಿಗೂ ಕ್ರಮ ಕೈಗೊಳ್ಳಲಾಗುತ್ತದೆ. ಸಂಘಟಿತ ಅಪರಾಧ ಇಲ್ಲದಿದ್ದರೆ, 3 ರಿಂದ 5 ವರ್ಷ ಸಜೆ ಹಾಗೂ ರೂ. 10 ಲಕ್ಷವರೆಗೂ ದಂಡ ವಿಧಿಸಲು ಅವಕಾಶವಿದೆ.

ಸರ್ಕಾರಿ ಹುದ್ದೆಗಳಿಗೆ ನಡೆಯುವ ನೇಮಕಾತಿ ಪರೀಕ್ಷೆಗಳ ಪ್ರಶ್ನೆಪತ್ರಿಕೆ ಸೋರಿಕೆ ಸೇರಿದಂತೆ ಪರೀಕ್ಷಾ ಅಕ್ರಮ ತಡೆಗಟ್ಟುವ ನಿಟ್ಟಿನಲ್ಲಿ ಪ್ರಕರಣದಲ್ಲಿ ಭಾಗಿಯಾಗಿ ತಪ್ಪಿತಸ್ಥರು ಎಂದು ದೃಢಪಟ್ಟಲ್ಲಿ ಗಂಭೀರ ಪ್ರಕರಣವೆಂದು ಪರಿಗಣಿಸಿ ಗರಿಷ್ಠ 10 ವರ್ಷ ಸಜೆ ಮತ್ತು ಕನಿಷ್ಠ ರೂ. 1 ಕೋಟಿ ದಂಡವಿಧಿಸಲು ಅವಕಾಶವಿರುವಂತೆ ಸರ್ಕಾರ ಕಾಯ್ದೆ ರೂಪಿಸಿದೆ.

ಈ ಕುರಿತ ಮಸೂದೆ ಲೋಕಸಭೆಯಲ್ಲಿ ಮಂಡನೆಯಾಗಿದೆ. 'ಸಾರ್ವಜನಿಕ ಪರೀಕ್ಷೆ (ಅಕ್ರಮಗಳ ತಡೆ) ಮಸೂದೆ 2024'ಯಲ್ಲಿ 20 ಪರೀಕ್ಷಾ ಅಕ್ರಮಗಳನ್ನು ಉಲ್ಲೇಖಿಸಲಾಗಿದೆ, ಅದರಂತೆ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದ್ದಾರೆ.

## ದಾಖಲೆ ಇಲ್ಲದ 35.48 ಲಕ್ಷ ನಗದು ವಶಕ್ಕೆ



**ಬಾಗಲಕೋಟೆ :** ಹುನಗುಂದ ಮತಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಗುಗ್ಗಲಮರಿ, ಧನ್ನೂರ ಚೆಕ್‌ಪೋಸ್ಟ ಸೇರಿದಂತೆ ಪ್ಲಾಯಿಂಗ್ ಸ್ಕ್ವಾಡ್ ತಂಡವು ದಾಖಲೆ ಇಲ್ಲದ ಒಟ್ಟು 35.48 ಲಕ್ಷ ನಗದು ಹಣವನ್ನು ವಶಕ್ಕೆ ಪಡೆದುಕೊಂಡಿದೆ.

ಗುಗ್ಗಲಮರಿ ಚೆಕ್‌ಪೋಸ್ಟನಲ್ಲಿ ಮಾರ್ಚ 29 ರಂದು ರಾತ್ರಿ ಸಮಯದಲ್ಲಿ ತಪಾಸಣೆ ವೇಳೆ 29.45 ಲಕ್ಷ ರೂ, ಧನ್ನೂರ ಚೆಕ್‌ಪೋಸ್ಟನಲ್ಲಿ 3.23 ಲಕ್ಷ ರೂ ಹಾಗೂ ಪ್ಲಾಯಿಂಗ್ ಸ್ಕ್ವಾಡ್ ತಂಡದಿಂದ 2.79 ಲಕ್ಷ ರೂ. ಸೇರಿ ಒಟ್ಟು 35.48 ಲಕ್ಷ ರೂ.ಗಳನ್ನು ವಶಕ್ಕೆ ಪಡೆಯಲಾಗಿದೆ. ಸದರಿ ಹಣವನ್ನು ಖಜಾನೆಗೆ ಜಮೆ ಮಾಡಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಜಾನಕಿ ಕೆ.ಎಂ ತಿಳಿಸಿದ್ದಾರೆ.

## ಗುಣಮಟ್ಟದ ಶಿಕ್ಷಣಕ್ಕೆ ಸಹಕಾರ ನೀಡಿ–ಸಿದ್ದು ಸವದಿ



**ಚಿಮ್ಮಡ :** ನಮ್ಮ ಭಾಗದಲ್ಲಿಯೂ ಕಡಿಮೆ ಶುಲ್ಕದಲ್ಲಿ ವಿಶ್ವ ಗುಣಮಟ್ಟದ ಶಿಕ್ಷಣ ನೀಡುವ ಉದ್ದೇಶದಿಂದ ಪ್ರಾರಂಭಿಸಲಾಗಿರುವ ಶಿಕ್ಷಣ ಸಂಸ್ಥೆಗೆ ಈ ಭಾಗದ ರೈತರು, ಶಿಕ್ಷಣ ಪ್ರೇಮಿ ಪಾಲಕರು ಸಹಕಾರ ನೀಡಬೇಕಾಗಿದೆ ಎಂದು ಶಾಸಕ ಸಿದ್ದು ಸವದಿ ಹೇಳಿದರು.

ಗ್ರಾಮದ ಶ್ರೀ ಪ್ರಭುಲಿಂಗೇಶ್ವರ ಇಂಟರನ್ಯಾಷನಲ್ ಸ್ಕೂಲ್ ಆವರಣದಲ್ಲಿ ರವಿವಾರ ಹಮ್ಮಿಕೊಳ್ಳಲಾಗಿದ್ದ ಬೇಸಿಗೆ ಶಿಬಿರ ಪ್ರಾರಂಭೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಗುಣಮಟ್ಟದ ಶಿಕ್ಷಣಕ್ಕಾಗಿನಮ್ಮಭಾಗದಿಂದಮೂಡಬಿದರಿ, ಉಡುಪಿ, ಮಂಗಳೂರು ವಿದ್ಯಾಕೇಂದ್ರಗಳಿಗೆ ಪ್ರತೀವರ್ಷ ನೂರಾರುವಿದ್ಯಾರ್ಥಿಗಳುಪ್ರವೇಶಪಡೆಯುತಿದ್ದು. ಆಭಾಗದಿಂದವಿದ್ಯಾರ್ಥಿಗಳುನಮ್ಮಶಿಕ್ಷಣಸಂಸ್ಥೆಯಲ್ಲಿ ಪ್ರವೇಶ ಪಡೆಯುವಂಥಹ ಗುಣಮಟ್ಟದ ಶಿಕ್ಷಣವನ್ನು ಕಡಿಮೆ ಶುಲ್ಕದಲ್ಲಿ ನೀಡುವ ಉದ್ದೇಶ ಈ ಸಂಸ್ಥೆ ಹೊಂದಿದ್ದು ಇದೇ ಶೈಕ್ಷಣಿಕ ವರ್ಷದಲ್ಲಿ ಪ್ರವೇಶಗಳು ಪ್ರಾರಂಭವಾಗಲಿವೆಎಂದರು.

ನಿವೃತ್ತ ಪ್ರಾಂಶುಪಾಲ ಎಸ್.ಎಸ್. ಹೂಲಿ ಮಾತನಾಡಿ ಪ್ರತಿಯೊಬ್ಬ ಪಾಲಕರು ತಾವು ಎಷ್ಟೆ ತೊಂದರೆಯಲ್ಲಿದ್ದರು ತಮ್ಮ ಮಕ್ಕಳ ಶಿಕ್ಷಣ, ಭವಿಷ್ಯದ ಕುರಿತು ಯಾವುದೇ ರಾಜಿ ಮಾಡಿಕೊಳ್ಳದೆ ಶಿಕ್ಷಣ ನೀಡುತ್ತಿರುವುದು ಒಳ್ಳೆಯ ಬೆಳವಣಿಗೆ ಯಾಗಿದ್ದು ಅವರ ನಿರೀಕ್ಷೆಗೆ ತಕ್ಕ ಮೌಲ್ಯಯುತ ಶಿಕ್ಷಣವನ್ನು ಶಿಕ್ಷಣ ಸಂಸ್ಥೆಗಳುನೀಡಬೇಕಾಗಿದೆಎಂದರು.

ಸಂಸ್ಥೆಯಸಂಸ್ಥಾಪಕಕಾರ್ಯದರ್ಶಿವಿದ್ಯಾಧರಸವದಿ ಪ್ರಾಸ್ತಾವಿಕವಾಗಿಮಾತನಾಡಿದರು.

ಜಿಲ್ಲಾ ಪಂಚಾಯತಿ ಮಾಜಿ ಸದಸ್ಯರಾದ ಬಾಬಾಗೌಡ ಪಾಟೀಲ, ಪುಂಡಲಿಕಪ್ಪಾ ಪಾಲಭಾವಿ, ಮಹಾಂತೇಶ ಹಿಟ್ಟಿನಮಠ, ಧರೆಪ್ಪಾ ಉಳ್ಳಾಗಡ್ಡಿ, ಮಹಾದೇವ ಧುಪದಾಳ, ಪರಶುರಾಮ ಬಸವ್ವಗೋಳ, ಮಾದುಗೌಡ ಪಾಟೀಲ, ಪರಪ್ಪಾ ಬ್ಯಾಕೋಡ, ಗಣಪತರಾವ್ ಹಜಾರೆ, ಶ್ರೀಶೈಲ ಬೀಳಗಿ, ರಾಮಣ್ಣ ಬಗನಾಳ, ಪುಂಡಲಿಕಪ್ಪಾ ಪೂಜಾರಿ, ಬಾಳಪ್ಪಾ ಹಳಿಂಗಳಿ, ಪರಪ್ಪಾಪಾಲಭಾವಿ ಸೇರಿದಂತೆ ಹಲವಾರು ಜನಪ್ರಮುಖರುವೇದಿಕೆಯಲ್ಲಿದ್ದರು.


"SIHI KAHI" Kannada Daily Morning, Editor, Owner, Publisher, Printer by **MARUTI BASAVANTAPPA HOASAMANI** Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at **SUDIN PRINTERS**, Sector No. 33, Shop No. 38 & 40, Opp. Ambedkar Bhavan, **NAVANAGAR, BAGALKOT-587 101.** Dist : Bagalkot, Karnataka State